ಸಂಪುಟ : 8 ಸಂಚಿಕೆ : 277 ಪುಟ : 4 ಬೆಲೆ : 3.00 ಗುರುವಾರ ಡಿಸೆಂಬರ್ 14, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 277 Pages : 4 Price : 3.00 Thursday December 14, 2023 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 14 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 15, 16, 17 ಶಹಪೂರ ಪೇಟೆ, ಡಿಸಿ ಮಿಲ್ ರೋಡ್, ಜವಳಗಲ್ಲಿ, ಮೀನಿನ ಮಾರ್ಕೆಟ್ ಲೈನ್, 4 ನಂಬರ್ ಶಾಲೆ ಲೈನ್, ಶುದ್ಧ ನೀರಿನ ಘಟಕದ ಲೈನ್, ಮಹೇಂದ್ರಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ಲೈನ್, ಅಂಗನವಾಡಿ ಲೈನ್, ಅಕ್ಕನ ಬಳಗದ ಲೈನ್, ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ 30, 34, 35 ವಡ್ಡರಗೇರಿ, ಕುಂಚಿ ಕೊರವರ ಓಣಿ ,ಮೂರುಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್.

ವಾರ್ಡ್ ನಂ. 22 2000 ಮನೆ ಲೈನ್, 1600 ಮನೆ ಲೈನ್, 1400 ಮನೆ ಲೈನ್ ,1800 ಮನೆ ಲೈನ್, 2000 ಮನೆ ಲೈನ್, 630 ಮನೆ ಲೈನ್, ಹಾಸ್ಟೆಲ್ ಲೈನ್, ಎದುರಿನ ಲೈನ್, ದೊಡ್ಡ ಮಸೂತಿ ಹಿಂದಿನ ಭಾಗ ಮುಂದಿನ ಭಾಗ.

ವಾರ್ಡ್ ನಂ. 4 ಟರ್ನಲ್ ಪೇಟೆ, ಮಂಜುನಾಥ ನಗರ, 200 ಮನೆ, ಕಣವಿ ಪ್ಲಾಟ್, ವಾಂಬೆ ಬಡಾವಣೆ 275 ಮನೆ ಲೈನ್, ಮಲ್ಲಪ್ಪ ಬಡಾವಣೆ, ರಾಮದೇವರ ಗುಡಿ ಲೈನ್, ಬಿ ಎಸ್ ಎನ್ ಎಲ್ ಆಫೀಸ್ ಲೈನ್, ಗೌರಿಗುಡಿ ಓಣಿ. ವಾರ್ಡ್ ನಂ. 3 ಹುಯಿಲಗೋಳ ರಸ್ತೆ, ಹೊಸಪೇಟೆ ಚೌಕ್, ಮೆರವಾಡೆದವರ ಲೈನ್, ಶ್ಯಾಗಿಯವರ ಲೈನ್, ರಜಪೂತ ಗಲ್ಲಿ, ಕುಂಬಾರ ಓಣಿ, ಗಾಂಧಿ ಗುಡಿ ಲೈನ್, ಶರೀಫನ ಗುಡಿ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ಅವುಗಳನ್ನು ದೃಶ್ಯ ಮಾಧ್ಯಮ ಹಾಗೂ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಕರವನ್ನು ಸಂದಾಯ ಮಾಡಿ ಸಹಕರಿಸಲು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಭಾರಿ ಭದ್ರತಾ ಲೋಪ: ಕಾನೂನು ಸಚಿವ ಎಚ್.ಕೆ. ಪಾಟೀಲ್ ಆತಂಕ

ಸಾಮಾನ್ಯ ಜನರ ರಕ್ಷಣೆ ಹೇಗೆ ಸಾಧ್ಯ?

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ



ಪ್ರಜಾಪ್ರಭುತ್ವದ ದೇಗುಲ ಎಂದೇ ಕರೆಯಲಾಗುವ ಸಂಸತ್ ಭವನದಲ್ಲಿ ಬುಧವಾರ ಭಾರೀ ಭದ್ರತಾ ವೈಫಲ್ಯ ಸಂಭವಿಸಿರುವುದು ಆತಂಕಕಾರಿಯಾಗಿದೆ. ಸಂಸತ್ ಭವನದಂತಹ ಸ್ಥಳದಲ್ಲೇ ಹೀಗಾದರೆ ಇನ್ನು ದೇಶದ ಜನರ ರಕ್ಷಣೆ ಹೇಗೆ ಸಾಧ್ಯ ಎಂದು ಕಾನೂನು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ್ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ಸಂಸತ್ ಭವನದಲ್ಲಿ ಬಹು ಹಂತದ ಭದ್ರತೆ, ತಪಾಸಣೆ ಇದ್ದರೂ ಈ ರೀತಿಯ ಭದ್ರತಾ ವೈಫಲ್ಯ ನಡೆದದ್ದು ಹೇಗೆ, ಇದು ಇಡೀ ದೇಶವೇ ಬೆಚ್ಚಿ ಬೀಳುವ ಘಟನೆ ಎಂದು ಅವರು ತಿಳಿಸಿದ್ದಾರೆ. ದಾಳಿ ನಡೆಸಿದ ಯುವಕರಿಗೆ ಸಂಸದ ಪ್ರತಾಪ್ ಸಿಂಹ ಅವರ ಕಚೇರಿಯಿಂದ ಪಾಸ್ ನೀಡಲಾಗಿದೆ. ಪಾಸ್ ನೀಡುವ ಮುನ್ನ ವ್ಯಕ್ತಿಗಳ ಪೂರ್ವಾಪರ ವಿಚಾರಿಸದೇ ಇರುವುದು ನಿರ್ಲಕ್ಷ್ಯವನ್ನು ತೋರುತ್ತಿದ್ದು, ಇದು ಅಕ್ಷಮ್ಯ ಎಂದು ಹೇಳಿದ್ದಾರೆ.

ಈ ಘಟನೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ನಮ್ಮ ದೇಶದ ಭದ್ರತೆಯನ್ನು ಬೊಟ್ಟು ಮಾಡಿ ತೋರಿಸಲು ನಾವೇ ದಾರಿ ಮಾಡಿಕೊಟ್ಟಂತಾಗಿದೆ. ಈ ಬಗ್ಗೆ ಸೂಕ್ತ ತನಿಖೆ ನಡೆಯಬೇಕು. ದಾಳಿ ನಡೆಸಿದ ಯುವಕರನ್ನು ಸರಿಯಾದ ರೀತಿಯಲ್ಲಿ ವಿಚಾರಣೆ ಮಾಡಬೇಕು. ಇನ್ನು ಮುಂದಾದರೂ ಇಂತಹ ಕೃತ್ಯಗಳು ನಡೆಯದಂತೆ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಆಗ್ರಹಿಸಿದ್ದಾರೆ.

ಸರಿಯಾಗಿ 22 ವರ್ಷಗಳ ಹಿಂದೆ ಇದೇ ದಿನ ಸಂಸತ್ ಭವನದ ಮೇಲೆ ದಾಳಿ ನಡೆದಿತ್ತು. 2001ರಲ್ಲಿ ಸಂಸತ್ ಭವನದ ಹೊರಭಾಗದಲ್ಲಿ ದಾಳಿ ನಡೆದಿತ್ತು. ಆದರೆ ಈ ಬಾರಿ ಸಂಸತ್ ಭವನದ ಒಳಭಾಗದಲ್ಲೇ ಈ ರೀತಿಯ ಘಟನೆ ನಡೆದಿದೆ. ದೇಶದಲ್ಲಿ ಅತೀ ಹೆಚ್ಚು ಭದ್ರತೆ ಇರುವುದು ಸಂಸತ್ ಭವನಕ್ಕೆ. ಇಲ್ಲಿಯೇ ಈ ರೀತಿಯ ಭದ್ರತಾ ಲೋಪವಾದರೆ ದೇಶದ ಭದ್ರತೆ ಹಾಗೂ ಸಾಮಾನ್ಯ ಜನರ ರಕ್ಷಣೆ ಹೇಗೆ ಸಾಧ್ಯ ಎನ್ನುವ ಪ್ರಶ್ನೆ ಮೂಡುವುದರಲ್ಲಿ ಆಶ್ಚರ್ಯವಿಲ್ಲ ಎಂದು ಸಚಿವರು ಆತಂಕ ವ್ಯಕ್ತಪಡಿಸಿದ್ದಾರೆ.

ಸಂಸತ್ ಭವನಕ್ಕೆ ಆಗಂತುಕರ ಪ್ರವೇಶ ಖಂಡಿಸಿ ವಿಧಾನಸಭೆ ನಿರ್ಣಯ ಅಂಗೀಕಾರ

ಆಗಂತುಕರ ವಿರುದ್ಧ ಕಠಿಣ ಕ್ರಮವಾಗಲಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ



ದೇಶದ ಪ್ರಜಾಪ್ರಭುತ್ವದ ಪವಿತ್ರ ಸ್ಥಳವಾದ ದೆಹಲಿಯ ಸಂಸತ್ತಿನಲ್ಲಿ ಆಗಂತುಕ ವ್ಯಕ್ತಿಗಳು ಪ್ರವೇಶಿಸಿದ ಘಟನೆ ಕಳವಳಕಾರಿಯಾಗಿದೆ. ಈ ಭದ್ರತಾ ವೈಫಲ್ಯವನ್ನು ಖಂಡಿಸಿ, ಬುಧವಾರ ಸಂಜೆ ಘಟನೆಯನ್ನು ಖಂಡಿಸಿ, ಸದನದಲ್ಲಿ ಖಂಡನಾ ನಿರ್ಣಯ ಅಂಗೀಕರಿಸಿತು.

ಕಲಾಪ ಮಧ್ಯದಲ್ಲಿ ವಿಷಯ ಪ್ರಸ್ತಾಪಿಸಿದ ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್. ಕೆ. ಪಾಟೀಲ, ಸಂಸತ್ತಿನಲ್ಲಿ ಬುಧವಾರ ಅಪರಿಚಿತ, ಆಗಂತುಕರು ಪ್ರವೇಶಿಸಿ, ಭಯ ಹುಟ್ಟಿಸಿರುವುದು ಖಂಡನೀಯವಾಗಿದೆ. ಈ ಘಟನೆಯನ್ನು ಸದನವು ಖಂಡಿಸಿ ನಿರ್ಣಯ ಕೈಗೊಳ್ಳಬೇಕೆಂದು ವಿಷಯ ಪ್ರಸ್ತಾಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಸಂಸತ್ ಸದನ ಪ್ರವೇಶಿಸಿ ಭಯ ಹುಟ್ಟಿಸಿದ ಘಟನೆ ಅತ್ಯಂತ ಖಂಡನೀಯ. ಇದನ್ನು ರಾಜ್ಯದ ಜನತೆಯ ಪರವಾಗಿ ಖಂಡಿಸಬೇಕು.

ರಾಜ್ಯ ವಿಧಾನಮಂಡಲದ ಕಲಾಪಗಳಿಗೂ ಸುರಕ್ಷತೆಯ ದೃಷ್ಟಿಯಿಂದ ಇದು ಪಾಠವಾಗಬೇಕು. ಸದನ ಸದಸ್ಯರು ಪ್ರವೇಶ ಪತ್ರಗಳನ್ನು ನೀಡುವಾಗ ಎಚ್ಚರಿಕೆ ವಹಿಸಿ ಪೂರ್ವಾಪರ ವಿಚಾರಿಸಿ ಪರಿಚಯಸ್ಥರಿಗೆ ಮಾತ್ರ ನೀಡಬೇಕು.

ಸಂಸತ್ ಭವನದಲ್ಲಿಯೂ ತಪಾಸಣೆ ತೀವ್ರವಾಗಬೇಕು. ಭದ್ರತಾ ಲೋಪವಾಗದಂತೆ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳಬೇಕು. ಈ ಕುರಿತು ತಮ್ಮ ಸಿಬ್ಬಂದಿಗಳಿಗೂ ಸೂಚನೆ ನೀಡಬೇಕೆಂದು ಸಭಾಧ್ಯಕ್ಷರಿಗೆ ತಿಳಿಸಿದರು.

ಘಟನೆಯನ್ನು ಖಂಡಿಸಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ. ಜಿ. ಪರಮೇಶ್ವರ, ವಿಪಕ್ಷ ನಾಯಕ ಆರ್. ಅಶೋಕ, ಶಾಸಕರಾದ ಸುರೇಶಕುಮಾರ್, ಅರಗ ಜ್ಞಾನೇಂದ್ರ ಸೇರಿದಂತೆ ಇತರರು ಮಾತನಾಡಿದರು.

ಸಭಾಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ಘಟನೆಯನ್ನು ರಾಜ್ಯದ ಪರವಾಗಿ ಕಠಿಣವಾಗಿ ಖಂಡಿಸುತ್ತೇವೆ. ಇಂದು ಸದನಕ್ಕೆ ಅಕ್ರಮವಾಗಿ ಪ್ರವೇಶಿಸಿದ ಆಗಂತುಕರ ವಿರುದ್ಧ ಕಠಿಣ ಕ್ರಮವಾಗಬೇಕು. ಸದನಗಳ ಪ್ರವೇಶಕ್ಕೆ ಪಾಸ್ ನೀಡುವಾಗ ಅವರ ಆಧಾರ್ ಕಾರ್ಡ್ ಪರಿಶೀಲಿಸಿ, ಸರಿಯಾದ ಪರಿಚಯ ನೋಡಿ ನೀಡಬೇಕು ಎಂದು ಹೇಳಿದರು.

ದ್ಯಾಮವ್ವ ದೇವಿ ದೇವಸ್ಥಾನದ ಶತಚಂಡೀ ಯಾಗದಲ್ಲಿ ಪಾಲ್ಗೊಂಡ ಶಾಸಕ ಜಿ.ಎಸ್. ಪಾಟೀಲ

ಧಾರ್ಮಿಕ ಕಾರ್ಯಗಳಿಂದ ಮನಸ್ಸಿಗೆ ನೆಮ್ಮದಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾವು ಸುಖದಿಂದ ಬಾಳಬೇಕೆಂದರೆ ಸ್ವಲ್ಪವಾದರೂ ಆಧ್ಯಾತ್ಮದತ್ತ ಮನಸ್ಸನ್ನು ಕೇಂದ್ರೀಕರಿಸಬೇಕು. ಆಗಾಗ ಇಂತಹ ಧಾರ್ಮಿಕ ಕಾರ್ಯಗಳು ನಡೆಯುವುದರಿಂದ ಮನಸ್ಸಿಗೆ ನೆಮ್ಮದಿ ದೊರಕುತ್ತದೆ. ನಮ್ಮ ಭಾರತೀಯ ಪರಂಪರೆಯಲ್ಲಿ ಹೋಮ-ಹವನಗಳಿಗೆ ವಿಶೇಷ ಸ್ಥಾನವಿದೆ. ಇಂದು ಇಲ್ಲಿ ನಡೆದ ಶತಚಂಡೀ ಯಾಗವು ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳಿಗಷ್ಟೆ ಅಲ್ಲದೆ, ಮತಕ್ಷೇತ್ರದ ಸರ್ವರಿಗೂ ಒಳ್ಳೆಯದಾಗುತ್ತದೆ ಎಂದು ಶಾಸಕ ಜಿ.ಎಸ್. ಪಾಟೀಲ ನುಡಿದರು.

ಇಲ್ಲಿನ ಗ್ರಾಮದೇವತೆ ಶ್ರೀ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಚಂಡೀ ಹೋಮದ ಪೂರ್ಣಾಹುತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಸಂಕಲ್ಪ ನೆರವೇರಿಸಿ ಅವರು ಮಾತನಾಡಿದರು.

ಯಾಗದ ನೇತೃತ್ವವನ್ನು ವೇ. ಮೂ. ಸಂಜೀವಭಟ್ಟ ಗಾಣಗಾಪೂರ ವಹಿಸಿದ್ದರು. ವಿಶ್ವನಾಥಭಟ್ಟ ಗ್ರಾಮಪುರೋಹಿತ ದಂಪತಿಗಳು ಶತಚಂಡಿ ಯಗದ ಯಜಮಾನತ್ವವನ್ನು ವಹಿಸಿಕೊಂಡಿದ್ದರು.

ಶತಚಂಡಿ ಯಾಗದಲ್ಲಿ ಹೊಸಪೇಟೆಯ ಋತ್ವಿಜರಾದ ಶಿವಪ್ರಸಾದಭಟ್ಟ, ಸಂತೋಷ ಜೋಷಿ, ಪ್ರತೀಕ ಕುಲಕರ್ಣಿ, ಪವನಭಟ್ಟ ಕುಲಕರ್ಣಿ, ನಂದನಭಟ್ಟ ಕುಲಕರ್ಣಿ, ಶ್ರೀನಿವಾಸಭಟ್ಟ ಕುಲಕರ್ಣಿ, ಧಾರವಾಡದ ಶಶಿಧರಭಟ್ಟ, ಅಮೋಘಭಟ್ಟ, ಸಂಜೀವಭಟ್ಟ, ರಾಘವೇಂದ್ರ ಕುಲಕರ್ಣಿ, ಭಾಸ್ಕರಭಟ್ಟ, ಕಾಂತೇಶಾಚಾರ್ ಗಣಾಚಾರಿ, ಅಪ್ಪಣ್ಣಭಟ್ಟ ಸೊರಟೂರ, ಶ್ರೀಕಾಂತ ಗುಡಿ, ವಿರುಪಾಕ್ಷಭಟ್ಟ ಜೋಷಿ ಚಂಡಿ ಪಾಠಗಳ ಪಠಣ ಮಾಡಿ ಪಾರಾಯಣವನ್ನು ಸಂಪೂರ್ಣಗೊಳಿಸಿದರು.

ಚಂಡಿ ಯಾಗದ ನೇತೃತ್ವ ವಹಿಸಿದ್ದ ಶ್ರೀವಲ್ಲಭಶಾಸ್ತ್ರಿ ಸದರಜೋಷಿ ಮಾತನಾಡಿ, ಹೋಮ-ಹವನಗಳು ಗ್ರಾಮದಲ್ಲಿ ಮೇಲಿಂದ ಮೇಲೆ ನಡೆಯುತ್ತಿದ್ದರೆ ಗ್ರಾಮವು ಸುಭಿಕ್ಷವಾಗಿರುತ್ತದೆ. ಗ್ರಾಮದೇವತೆ ಶ್ರೀ ದ್ಯಾಮವ್ವ ದೇವಿಯ ಕಳಸಾರೋಹಣ ಸಂದರ್ಭದಲ್ಲಿ ಶತಚಂಡಿ ಯಾಗವನ್ನು ನೆರವೇರಿಸುವ ಮೂಲಕ ನರೇಗಲ್ಲ ಮತ್ತು ಮಜಿರೆ ಗ್ರಾಮಗಳ ಸರ್ವ ಸದ್ಭಕ್ತರು ಶ್ರೀದೇವಿ ಕೃಪೆಗೆ ಪಾತ್ರರಾಗಿದ್ದಾರೆ. ಇದರಿಂದ ಗ್ರಾಮದಲ್ಲಿ ಮತ್ತು ಸುತ್ತಲಿನ ಎಲ್ಲ ಗ್ರಾಮಗಳಲ್ಲಿ ಸುಖ, ಶಾಂತಿ ನೆಮ್ಮದಿ ನೆಲೆಸಿ, ಕಾಲಕಾಲಕ್ಕೆ ಮಳೆ ಬೆಳೆ ಆಗಲಿದೆ ಎಂದರು.

ಈ ಸಂದರ್ಭದಲ್ಲಿ ತೋಟಗಂಟಿಯ ವಿ.ಎನ್. ಪಾಟೀಲ, ಡಾ. ಜಿ.ಕೆ. ಕಾಳೆ, ಅರುಣ ಗ್ರಾಮಪುರೋಹಿತ, ಎ.ಜಿ. ಕುಲಕರ್ಣಿ, ವಿಶ್ವನಾಥ ಗ್ರಾಮಪುರೋಹಿತ, ಮುಕುಂದ ಸೂರ್ಯಭಟ್, ಅಜಿತ ಕುಲಕರ್ಣಿ, ಗುರುರಾಜ ಕುಲಕರ್ಣಿ, ಹರೀಶ ಕುಲಕರ್ಣಿ, ಆನಂದ ಕುಲಕರ್ಣಿ, ಕಳಸಾರೋಹಣ ಸಮಿತಿ ಅಧ್ಯಕ್ಷ ಬಾಳಪ್ಪ ಸೋಮಗೊಂಡ, ಶಿವನಗೌಡ ಪೊಲೀಸ್‌ಪಾಟೀಲ, ಶೇಕಪ್ಪ ಲಕ್ಕನಗೌಡ್ರ, ವಿರುಪಾಕ್ಷಪ್ಪ ಲಕ್ಕನಗೌಡ್ರ, ಎ.ಆರ್. ಮಲ್ಲನಗೌಡ್ರ, ಆರ್.ಜಿ. ಪಾಟೀಲ, ಬಾಳಪ್ಪ ಕಳಕಣ್ಣವರ, ಬಸನಗೌಡ ಭರಮಗೌಡರ, ಮಲ್ಲನಗೌಡ ಮಲ್ಲನಗೌಡ್ರ, ಮಜಿರೆ ಗ್ರಾಮದ ಗಣ್ಯರು, ಸದ್ಭಕ್ತರು ಇದ್ದರು. ಅರುಣ ಬಿ.ಕುಲಕರ್ಣಿ ನಿರ್ವಹಿಸಿದರು.

> ಗ್ರಾಮದೇವತೆಯ ಸೇವೆ ಮಾಡುವುದರಿಂದ ಆಕೆ ಎಲ್ಲವನ್ನೂ ಕೊಟ್ಟು ಆಶೀರ್ವದಿಸುತ್ತಾಳೆ. ಅದರಲ್ಲಿಯೂ ನರೇಗಲ್ಲದ ದ್ಯಾಮವ್ವ ದೇವಿ ಅತ್ಯಂತ ಜಾಗೃತ ದೇವಿಯಾಗಿದ್ದು, ಅವಳ ಆರಾಧನೆಯಿಂದ ಸಕಲ ಸಂಪತ್ತುಗಳೂ ಮನುಷ್ಯನಿಗೆ ದೊರಕಿ, ಆಪತ್ತುಗಳು ದೂರವಾಗುತ್ತವೆ. ಇಂತಹ ಪವಿತ್ರ ಕಾರ್ಯದಲ್ಲಿ ಪಾಲ್ಗೊಳ್ಳುವ ಅವಕಾಶ ನನಗೆ ಮತ್ತು ನನ್ನ ಕುಟುಂಬಕ್ಕೆ ದೊರಕಿರುವುದು ನಮ್ಮ ಪೂರ್ವ ಜನ್ಮದ ಪುಣ್ಯವೇ ಆಗಿದೆ.
>
> – ಜಿ.ಎಸ್. ಪಾಟೀಲ.
> ಶಾಸಕರು, ರೋಣ.

2023-24ನೇ ಸಾಲಿನ ಮೊದಲನೇ ಪೂರಕ ಅಂದಾಜುಗಳ ವೆಚ್ಚ ಮಂಡನೆ

ಪೂರಕ ಅಂದಾಜು ವೆಚ್ಚಗಳಿಗೆ ವಿಧಾನಸಭೆ ಅಂಗೀಕಾರ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಬೆಳಗಾವಿ ಚಳಿಗಾಲದ ಅಧಿವೇಶನದ ವಿಧಾನಸಭಾ ಕಲಾಪದಲ್ಲಿ ಬುಧವಾರ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ 2023-24ನೇ ಸಾಲಿನ ಮೊದಲನೇ ಪೂರಕ ಅಂದಾಜುಗಳ ವೆಚ್ಚ 3542.10 ಕೋಟಿ ರೂ. ಗಳಿಗೆ ಅಂಗೀಕಾರ ದೊರಕಿದೆ.

ಸದನದ ಅಂಗೀಕಾರ ಕೋರಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಹಿಂದೆ ಜುಲೈನಲ್ಲಿ ರೂ.3,41,321 ಕೋಟಿಗಳ ಆಯವ್ಯಯ ಮಂಡಿಸಲಾಗಿತ್ತು. ಆಯವ್ಯಯದಲ್ಲಿ ಘೋಷಿಸಿದ ಹೊರತಾಗಿ ಸರ್ಕಾರದ ಕೆಲವು ಖರ್ಚುಗಳಿಗೆ ರಾಜ್ಯದ ತುರ್ತು ನಿಧಿಯಡಿ ಅನುದಾನವನ್ನು ಒದಗಿಸಲಾಗಿದೆ. ಹೀಗೆ ವೆಚ್ಚ ಮಾಡಿದ ಮೊಬಲಗನ್ನು ತೋರಿಸುವ ಪೂರಕ ಅಂದಾಜು ವಿವರಣೆಯನ್ನು ರಾಜ್ಯದ ಸದನದಲ್ಲಿ ಇಟ್ಟು ಒಪ್ಪಿಗೆ ಪಡೆದುಕೊಳ್ಳಬೇಕು. ▸▸ 3ನೇ ಪುಟಕ್ಕೆ

> ರಾಜ್ಯ ಸರ್ಕಾರ ರೂ.39 ಸಾವಿರ ಕೋಟಿಗಳ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಇದರ ನಡುವೆಯು ಆರ್ಥಿಕ ಶಿಸ್ತು ಕಾಪಾಡಿಕೊಂಡು ಬರಲಾಗಿದೆ. ಹಿಂದಿನ ಸರ್ಕಾರಗಳು ಸಹ ಪೂರಕ ಅಂದಾಜು ಮಂಡಿಸಿವೆ. ಸದನವು 2023-24ನೇ ಸಾಲಿನ ಪೂರಕ ಅಂದಾಜಿಗೆ ಅಂಗೀಕಾರ ನೀಡುವಂತೆ ಕೋರಿದರು. ಪೂರಕ ಅಂದಾಜಿನ ಧನವಿಯೋಗಕ್ಕೆ ಅನುವಾಗುವಂತೆ 2023ನೇ ಸಾಲಿನ ಕರ್ನಾಟಕ ಧನವಿನಿಯೋಗ ಸಂಖ್ಯೆ-4 ವಿಧೇಯಕವನ್ನು ಸದನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದರು.

ಲಿಂಗರಾಜ ಕುರ್ತಕೋಟಿ ಅವರ ಸೇವೆ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರ ಸಂಸ್ಥಾನಮಠದ 13ನೇ ಪೀಠಾಧ್ಯಕ್ಷರಾದ ಜ.ಫ. ಸಿದ್ದರಾಮ ಶ್ರೀಗಳ ಸುವರ್ಣ ತುಲಾಭಾರ ಮಹೋತ್ಸವಕ್ಕೆ ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲೂಕಿನ ಲಿಂಗರಾಜ ಕುರ್ತಕೋಟಿ ಅವರ ಸಾಮಾಜಿಕ ಸೇವೆ ಸ್ಮರಣೀಯ ಎಂದು ಶ್ರೀಮಠದ ಉತ್ತರಾಧಿಕಾರಿ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ಶ್ರೀಮಠದಲ್ಲಿ ಲಿಂ. ಜ.ಫ.ಚನ್ನವೀರ ಸ್ವಾಮೀಗಳ ಪುಣ್ಯ ಸ್ಮರಣೋತ್ಸವದ ನಿಮಿತ್ತ ಎಲ್.ಬಿ. ಕುರ್ತಕೋಟಿ ದಂಪತಿಗಳು ಕೊಡಮಾಡಿದ 111 ಗ್ರಾಂ ಬಂಗಾರ ಹಾಗೂ 33 ಸಾವಿರ ರೊಟ್ಟಿ ಸ್ವೀಕರಿಸಿ ಮಾತನಾಡಿದರು.

ಕುರ್ತಕೋಟಿ ಅವರು ಶೈಕ್ಷಣಿಕ, ಔದ್ಯೋಗಿಕ, ಸಾಮಾಜಿಕ, ಕೃಷಿ ಮತ್ತು ಹೈನುಗಾರಿಕೆಯ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ. ದಾಂಪತ್ಯ ಜೀವನಕ್ಕೆ ಸಂಪತ್ತು ಮುಖ್ಯವಲ್ಲ, ಸಮಾಧಾನ ಮುಖ್ಯ. ಈ ನಿಟ್ಟಿನಲ್ಲಿ ದಂಪತಿಗಳು ನಿರಾಡಂಬರವಾಗಿ ಬದುಕನ್ನು ಸಾಗಿಸುತ್ತಿದ್ದು, ಕತೃ ಫಕೀರೇಶ್ವರರು ಇವರ ಬದುಕನ್ನು ಇನ್ನಷ್ಟು ಹಸನುಗೊಳಿಸಲಿ ಎಂದು ಹಾರೈಸಿದರು.

ಶ್ರೀಗಳ ಸುವರ್ಣ ಮಹೋತ್ಸವಕ್ಕೆ ಈಗಾಗಲೇ ಭಕ್ತರು ಸ್ವ-ಇಚ್ಛೆಯಿಂದ ಬಂಗಾರ ಹಾಗೂ ಹಣವನ್ನು ತಂದು ಶ್ರೀಮಠಕ್ಕೆ ಸಲ್ಲಿಸುತ್ತಿದ್ದಾರೆ. ಇದರಿಂದ ನಮ್ಮ ಯೋಜನೆ ಸ್ಫೂರ್ತಿದಾಯಕವಾಗಿದೆ. ಇತಿಹಾಸದ ಪುಟ ಸೇರುವ ಹಾಗೆ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಗುವುದು ಎಂದರು.

ಜ.ಫ. ಸಿದ್ದರಾಮ ಸ್ವಾಮೀಜಿ, ಎಲ್.ಬಿ. ಕುರ್ತಕೋಟಿ ದಂಪತಿ, ಡಿಎಫ

ಸಾಕ್ಷಿ ಸುಭಾಷಿತ

ನೀತಿ ಧರ್ಮಗಳು ನಮ್ಮನ್ನು ಬಂಧಿಸುವುದಿಲ್ಲ ರಕ್ಷಿಸುತ್ತವೆ.

–ಅಯೋ ಬುಸ್ಕಾಗ್ಲಿಯ

ಸಂಪಾದಕೀಯ

ಭದ್ರತಾ ವೈಫಲ್ಯದ ಜೊತೆಗೆ ಕೃತ್ಯದ ಹಿಂದಿನ ಉದ್ದೇಶ ಸ್ಪಷ್ಟವಾಗಲಿ

ಲೋಕಸಭೆ ಕಲಾಪದ ಸಂದರ್ಭದಲ್ಲಿ ಇವತ್ತು ಕರ್ನಾಟಕದ ಮೂಲದ ಇಬ್ಬರು ವ್ಯಕ್ತಿಗಳು ವೀಕ್ಷಕರ ಗ್ಯಾಲರಿಯಿಂದ ಜಿಗಿದು ಸಂಸದರತ್ತ ನುಗ್ಗಿರುವ ಘಟನೆ ನಡೆದಿದೆ. ಇದರಿಂದಾಗಿ ಸಂಸತ್ತಿನಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ವಿಶೇಷವಾಗಿ ಭದ್ರತಾ ಲೋಪ ಎದ್ದು ಕಾಣುವಂತಾಯಿತು.

ಇಬ್ಬರು ವ್ಯಕ್ತಿಗಳ ಈ ಕೃತ್ಯವನ್ನು ಖಂಡಿಸಿ ಕಾಂಗ್ರೆಸ್ ಹಲವು ಕಡೆಗಳಲ್ಲಿ ಪ್ರತಿಭಟನೆಯನ್ನು ದಾಖಲಿಸಿದೆ. ಅದರಲ್ಲೂ ಕರ್ನಾಟಕ ಮೂಲದ ಈ ಇಬ್ಬರು ವ್ಯಕ್ತಿಗಳು, ಸಂಸದ ಪ್ರತಾಪ್ ಸಿಂಹ ಕಚೇರಿಯಿಂದ ಪಾಸ್ ಪಡೆದು ಸಂಸತ್ ಪ್ರವೇಶಿಸಿದ್ದರು ಎನ್ನುವ ಸಂಗತಿ ರಾಜ್ಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಅನೇಕ ಕಾಂಗ್ರೆಸ್ ನಾಯಕರು ಭದ್ರತಾ ಲೋಪವನ್ನ ಬಿಜೆಪಿಯ ಆಡಳಿತ ವೈಫಲ್ಯ ಎಂದು ಟೀಕಿಸಿದ್ದಾರೆ. ಸಂಸದ ಪ್ರತಾಪ್ ಸಿಂಹ ಅವರನ್ನು ಬಂಧಿಸಿ ತಕ್ಷಣ ವಿಚಾರಣೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಒಟ್ಟಾರೆ ಘಟನೆಗೆ ಭದ್ರತಾ ವೈಫಲ್ಯ ಕಾರಣ ಎನ್ನುವುದು ಅತ್ಯಂತ ಸ್ಪಷ್ಟವಾಗಿದೆ. ಭದ್ರತೆ ಲೋಪವನ್ನ ಸರಿಪಡಿಸಿಕೊಳ್ಳುವ ಜೊತೆ-ಗೆ ಭವಿಷ್ಯದಲ್ಲಿ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕೈಗೊಳ್ಳುವುದು ಅವಶ್ಯವಾಗಿದೆ.

ಅದರ ಜೊತೆಗೆ ಈ ಇಬ್ಬರು ವ್ಯಕ್ತಿಗಳು ಈ ರೀತಿ ಮಾಡಲು ಕಾರಣ ಏನು ಎನ್ನುವುದನ್ನು ತನಿಖಾ ಸಂಸ್ಥೆಗಳು ಬಹಿರಂಗಪಡಿಸಬೇಕಿದೆ. ಪ್ರಾಥಮಿಕ ತನಿಖೆಯಲ್ಲಿ ಈ ಇಬ್ಬರು ಹಲವಾರು ಜನಪರ ಚಳುವಳಿಗಳಲ್ಲಿ ಭಾಗವಹಿಸಿದ್ದರು ಎನ್ನುವುದು ಗೊತ್ತಾಗಿದೆ. ಬಂಧಿತರ ಕುಟುಂಬದ ಸದಸ್ಯರು ಸಹ ಇದನ್ನೇ ಹೇಳಿದ್ದಾರೆ.

ಕಲಾಪದಲ್ಲಿ ಈ ರೀತಿ ಗದ್ದಲ ಸೃಷ್ಟಿಸಿರುವುದು ಆಕಸ್ಮಿಕ ಘಟನೆಯಲ್ಲ. ವಿವೇಚನೆಯಿಂದಲೇ ಈ ರೀತಿ ಮಾಡಿರುವುದು ಕಲಾಪದ ವಿಡಿಯೋಗಳನ್ನು ನೋಡಿದರೆ ಸ್ಪಷ್ಟವಾಗುತ್ತದೆ. ಆ ಕಾರಣಕ್ಕಾಗಿ ಕೃತ್ಯದ ಉದ್ದೇಶ ಸ್ಪಷ್ಟವಾಗಬೇಕಿದೆ.

ಜ. ತೋಂಟದಾರ್ಯ ಪಿಯು ಕಾಲೇಜಿನಲ್ಲಿ ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮ

ಅನೀಮಿಯಾದಿಂದ ಬಳಲುವವರಿಗೆ ಸೂಕ್ತ ಚಿಕಿತ್ಸೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಆರೋಗ್ಯಯುತ ಜೀವನ ನಡೆಸಲು ಶಿಸ್ತುಬದ್ಧ ಜೀವನಶೈಲಿಯೊಂದಿಗೆ ಪ್ರತಿಯೊಬ್ಬರಿಗೂ ಪೌಷ್ಠಿಕ ಆಹಾರ, ಅದರಲ್ಲೂ ಮುಖ್ಯವಾಗಿ ಕಬ್ಬಿಣಾಂಶ ಹೆಚ್ಚಾಗಿರುವ ಆಹಾರ ಪದಾರ್ಥಗಳನ್ನು ಸೇವಿಸಿದರೆ ರಕ್ತಹೀನತೆ ತಡೆಗಟ್ಟಬಹುದು ಎಂದು ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ಡಾ. ಡಿ.ಎಂ. ಹುಲಕುಂದ ಹೇಳಿದರು

ಪಟ್ಟಣದ ಜಗದ್ಗುರು ತೋಂಟ-ದಾರ್ಯ ಪಿಯು ಕಾಲೇಜಿನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಡೆದ ಅನೀಮಿಯ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಅನೇಕ ಕಾರಣಗಳಿಂದ ಆರೋಗ್ಯ ಹದಗೆಡುತ್ತಿದೆ. ಹೀಗಾಗಿ ಎಲ್ಲರೂ ಆರೋಗ್ಯವಂತರಾಗಿ ಇರಬೇಕು ಎಂದು ಸರ್ಕಾರವು ಮಕ್ಕಳು, ಯುವಸಮೂಹ ಹಾಗೂ ಗರ್ಭಿಣಿಯರು ಮತ್ತು ತಾಯಂದಿರಲ್ಲಿ ರಕ್ತಹೀನತೆ, ಅಪೌಷ್ಠಿಕತೆ ನಿವಾರಣೆಗಾಗಿ ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮವನ್ನು ಜಾರಿಗೆ ತಂದಿದೆ. ಅನೀಮಿಯಾದಿಂದ ಬಳಲುವವರಿಗೆ ಸೂಕ್ತ ಚಿಕಿತ್ಸೆ ಜತೆಗೆ ಔಷಧಿ ನೀಡಲಾಗುವುದು ಎಂದ ಅವರು, ಕೆಲವು ರೋಗಗಳನ್ನು ನಮ್ಮ ಆಹಾರ ಪದ್ಧತಿ, ಮುಂಜಾಗ್ರತೆಯ ಪ್ರಯತ್ನದಿಂದ ದೂರವಿಡಲು ಸಾಧ್ಯವಿದೆ. ಹೀಗಾಗಿ ಪ್ರತಿಯೊಬ್ಬರೂ ನಿಯಮಿತವಾಗಿ ವ್ಯಾಯಾಮ, ಯೋಗ ಹಾಗೂ ಪೌಷ್ಠಿಕ ಆಹಾರ ಸೇವನೆ ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಿದೆ ಎಂದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಅರೋಗ್ಯ ತಪಾಸಣೆ ಹಾಗೂ ರಕ್ತಹೀನತೆಯ ಪರೀಕ್ಷೆ ನಡೆಸಲಾಯಿತು. ಸಿಬಿಎಸ್‌ಸಿ ಶಾಲೆಯ ಕವಿತಾ ಪಾಟೀಲ, ಅಶೋಕ ಅಂಗಡಿ, ಮಲ್ಲನಗೌಡ ಗೌಡರ, ಹುತ್ತಪ್ಪ ಮಾರನಬಸರಿ, ಶಿವಕುಮಾರ ಕೋಸಗಿ, ಆನಂದ ಜೂಚನಿ, ಸಿದ್ದು ಕರಬಾಶೆಟ್ಟರ, ಕಲಾಶ್ರೀ ಬಿ, ಶೃತಿ ನಾಡಕಟ್ಟಿನ, ಫಾತಿಮಾ ಕುದ್ದಣವರ, ರೇಷ್ಮಾ ನಡವಿನಮನಿ, ಹನುಮಂತ ಎನ್, ಮಾಲಾ ರತ್ನಾಕರ, ಪ್ರವೀಣ ಚಿತ್ರಗಾರ ಹಾಗೂ ಅಶೋಕ ಅರಹುಣಸಿ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

> ಕಾಲೇಜಿನ ಪ್ರಾಚಾರ್ಯ ಸಂಗಮೇಶ ಬಾಗೂರ ಮಾತನಾಡಿ, ಆಧುನಿಕ ಜೀವನ ಶೈಲಿಯಿಂದ ಮನುಷ್ಯನು ದಿನಚರಿಗೆ ಅನುಗುಣವಾಗಿ ಬದುಕು ನಡೆಸಲು ಸಾಧ್ಯವಾಗುತ್ತಿಲ್ಲ. ಪ್ರತಿ ಕ್ಷಣ ಕೆಲಸದ ಜಂಜಾಟಕ್ಕೆ ಒಳಗಾಗಿ ಒತ್ತಡದ ಜೀವನವನ್ನು ಕಟ್ಟಿಕೊಳ್ಳುತ್ತಿದ್ದಾನೆ. ಹೀಗಾಗಿ ದೇಹದ ಅಂಗಾಂಗಗಳಿಗೆ ಸಾಕಷ್ಟು ಆಮ್ಲಜನಕವನ್ನು ಸಾಗಿಸಲು ಅಗತ್ಯವಾದ ಪ್ರಮಾಣದಲ್ಲಿ ಆರೋಗ್ಯಕರ ಕೆಂಪು ರಕ್ತಕಣಗಳ ಕೊರತೆ ಉಂಟಾಗಿ ರಕ್ತಹೀನತೆ ಸಮಸ್ಯೆಗೆ ಒಳಗಾಗುತ್ತಿದ್ದಾನೆ ಎಂದರು.

ಅವೈಜ್ಞಾನಿಕ ರಸ್ತೆ ವಿಭಜಕ ಕುರಿತು ಸದನದಲ್ಲಿ ಚರ್ಚೆ: ತೆರವಿಗೆ ಶಾಸಕ ವೀರೇಂದ್ರ ಪಪ್ಪಿ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಚಿತ್ರದುರ್ಗ ನಗರದ ಪ್ರಮುಖ ರಸ್ತೆಗಳಲ್ಲಿ ನಿರ್ಮಿಸಲಾಗಿರುವ ಅವೈಜ್ಞಾನಿಕ ರಸ್ತೆ ವಿಭಜಕಗಳ ಕುರಿತು ಚರ್ಚೆ ನಡೆಯಿತು.

ಮಂಗಳವಾರದ ವಿಧಾನಸಭಾ ಕಲಾಪದಲ್ಲಿ ಶಾಸಕ ವೀರೇಂದ್ರ ಪಪ್ಪಿ ಈ ಕುರಿತು ಪ್ರಶ್ನಿಸಿ, ಸರ್ಕಾರದ ಗಮನ ಸೆಳೆದರು. ಐತಿಹಾಸಿಕವಾಗಿರುವ ಚಿತ್ರದುರ್ಗ ನಗರದಲ್ಲಿ ಮೊದಲಿನಿಂದಲೂ ಚಿಕ್ಕ ರಸ್ತೆಗಳು ಇವೆ. ನಗರದ ಮುಖ್ಯ ರಸ್ತೆ ಕೇವಲ 40 ಅಡಿ ಅಗಲವಿದೆ. ಇದರ ಮಧ್ಯ 5 ಎತ್ತರ ಹಾಗೂ 4 ಅಡಿ ಅಗಲದ



ರಸ್ತೆ ವಿಭಜಕಗಳನ್ನು ನಿರ್ಮಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರು, ಪಾದಚಾರಿಗಳು, ವ್ಯಾಪಾರಿಗಳು ಬವಣೆ ಪಡುವಂತೆಯಾಗಿದೆ. ರಸ್ತೆ ಅಪಘಾತಗಳು ಹೆಚ್ಚಾಗುತ್ತಿವೆ ಎಂದರು.

ಕೆ.ಎಸ್.ಆರ್.ಟಿ. ಬಸ್ ನಿಲ್ದಾಣದಿಂದ ಗಾಂಧಿ ವೃತ್ತ ಸಂಪರ್ಕಿಸುವ ರಸ್ತೆ ಕಳೆದ 35 ವರ್ಷಗಳಿಂದ ಏಕಮುಖ ಸಂಚಾರದ ರಸ್ತೆಯಾಗಿದೆ. ಕಿರಿದಾದ ಏಕಮುಖ ರಸ್ತೆಯಲ್ಲೂ ದೊಡ್ಡ ರಸ್ತೆ ವಿಭಜಕಗಳನ್ನು ನಿರ್ಮಿಸಿರುವುದರಿಂದ ಕೇವಲ 10 ರಿಂದ 12 ಅಡಿ ರಸ್ತೆಗಳು ನಿರ್ಮಾಣವಾಗಿ, ಬಸ್ ಸೇರಿದಂತೆ ಇತರೆ ಭಾರಿ ವಾಹನಗಳು ಸಂಚಾರಕ್ಕೆ ತೊಂದರೆಯಾಗಿದೆ. ಇಲ್ಲಿ ಸಂಚರಿಸುವ ಪಾದಚಾರಿಗಳಿಗೆ ಕಷ್ಟವಾಗಿದೆ. ನಗರವಾಸಿಗಳು ಹಾಗೂ ನಗರಕ್ಕೆ ಆಗಮಿಸುವ ಜನರು ಸಹ ರಸ್ತೆ ವಿಭಜಕಗಳ ತೆರವಿಗೆ ಆಗ್ರಹಿಸುತ್ತಿದ್ದಾರೆ. ವೈಯಕ್ತಿಕವಾಗಿ ಸ್ವತಃ ರಸ್ತೆ ವಿಭಜಕಗಳ ಪರೀಶಲನೆ ನೆಡೆಸಿದ್ದೇನೆ. ತುರ್ತಾಗಿ ರಸ್ತೆ ವಿಭಜಕಗಳನ್ನು ತೆರವು ಆಗಬೇಕಿದೆ ಎಂದು ಸರ್ಕಾರವನ್ನು ಒತ್ತಾಯಿಸಿದರು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಪರವಾಗಿ ಸದನದಲ್ಲಿ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ, ಅವೈಜ್ಞಾನಿಕ ರಸೆ ವಿಭಜಕ ನಿರ್ಮಿಸಿದ ಗುತ್ತಿಗೆದಾರ ಬಿಲ್‌ಗಳನ್ನು ಸರ್ಕಾರ ಈಗಾಗಲೇ ತಡೆಹಿಡಿದಿದೆ. ವಿಭಜಕಗಳ ತೆರವಿನ ಕುರಿತು ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಸಚಿವರ ಗಮನಕ್ಕೆ ತರುವುದಾಗಿ ಹೇಳಿದರು.

ಪ್ರಾಚಾರ್ಯರಾಗಿ ಡಾ. ಕಣವಿ ಅಧಿಕಾರ ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಶ್ರೀ ಕಲ್ಮೇಶ್ವರ ವಿದ್ಯಾಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತಕೋತ್ತರ ಕೇಂದ್ರದ ನೂತನ ಪ್ರಾಚಾರ್ಯರಾಗಿ ಡಾ. ಪಿ.ಎಸ್. ಕಣವಿ ಅಧಿಕಾರ ವಹಿಸಿಕೊಂಡರು.

ಕಳೆದ 33 ವರ್ಷಗಳಿಂದ ರಸಾಯನಶಾಸ್ತ್ರ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, ವಿಭಾಗದ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿ ಪ್ರಾಚಾರ್ಯರ ಹುದ್ದೆ ಅಲಂಕರಿಸಿರುವ ಡಾ. ಪ್ರಕಾಶ ಎಸ್.ಕಣವಿ ಅವರಿಗೆ ಮಹಾವಿದ್ಯಾಲಯದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಡಾ. ಎಸ್.ಬಿ. ಸಜ್ಜನರ್, ಡಾ. ಪ್ರಭು ಗಂಜಿಹಾಳ, ಪ್ರೊ. ಎನ್.ಆರ್. ಹಿರೇಸಕ್ಕರಗೌಡರ, ಪ್ರೊ. ಎಸ್. ವಾಯ್. ಪೂಜಾರ, ಡಾ.ಕುಮಾರ ಹಂಜಗಿ, ಪ್ರಾಧ್ಯಾಪಕರಾದ ವಿ.ಪಿ. ಪಾಟೀಲ, ಎಂ.ಎಸ್. ಬೇವೂರ, ರೇಷ್ಮಾ ಟಕ್ಕೇದ, ಜಿ.ಎಂ. ಪೊಲೀಸ್‌ಪಾಟೀಲ, ಎಸ್.ಬಿ. ಹಳ್ಳೂರ, ವಿ.ಬಿ. ಜಾಲಿಹಾಳ, ವಿ.ಎಸ್. ಕಪ್ಪಲಿ, ಸಂತೋಷ ಮಾಳವಾಡ, ಆನಂದ ಕೆಂಚನಗೌಡರ, ಕೆ.ಎ. ಕೊಪ್ಪದ, ಜಯಶ್ರೀ ಪಾಟೀಲ, ಶಿಲ್ಪಾ ಮೆದನಾಪೂರ, ಎಸ್. ಆರ್. ಮುಂದಿನಮನಿ, ಎಸ್.ಜಿ. ಮಾಳವಾಡ ಸೇರಿದಂತೆ ಬೋಧಕ-ಬೋಧಕೇತರ ಸಿಬ್ಬಂದಿಗಳಿದ್ದರು.

ಮನಸೂರೆಗೊಂಡ ಸಾಂಸ್ಕೃತಿಕ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಗ್ರಾಮ ದೇವತೆ ಶ್ರೀ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವದಲ್ಲಿ ಮಂಗಳವಾರ ಸಂಜೆ ನರೇಗಲ್ಲದ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಮನಸೂರೆಗೊಂಡವು. ವಿದ್ಯಾರ್ಥಿನಿ ವಿಜಯಲಕ್ಷ್ಮೀ ಹಿರೇಗೌಡ್ರ ದೇಶ ಭಕ್ತಿ ಗೀತೆ ಹಾಡಿ ರಂಜಿಸಿದಳು. ಸುಗ್ಗಿಯ ಕೋಲಾಟ ಪ್ರದರ್ಶನ ಎಲ್ಲರ ಮನ ರಂಜಿಸಿತು.

ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಮಾಡಿದ್ದ ಚಕ್ಕಡಿಗಳೊಂದಿಗೆ ಉಳವಿ ಯಾತ್ರೆಯ ರೂಪಕ ಅಂದಿನ ದಿನಗಳ ವೈಭವವನ್ನು ಮರುಕಳಿಸಿತು. ಅನುಭವ ಮಂಟಪ ರೂಪಕ ಅಕ್ಕ ಮಹಾದೇವಿಯ ಅನುಭವ ಮಂಟಪ ಪ್ರವೇಶದ ಸಂಗತಿಯನ್ನು ವಿವರವಾಗಿ ತೋರಿಸಿತು. ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯೆ ಭಾರತಿ ಶಿರ್ಸಿ ಅವರ ನೇತೃತ್ವದಲ್ಲಿ ಶಿಕ್ಷಕ ಬಳಗದವರು ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಉತ್ಸವ ಸಮಿತಿ ಅಧ್ಯಕ್ಷ ಬಾಳಪ್ಪ ಸೋಮಗೊಂಡ, ಗಣ್ಯ ವರ್ತಕ ಮುತ್ತಣ್ಣ ಪಲ್ಲೇದ ಸಾಂಸ್ಕೃತಿಕ ಕಾರ್ಯಕ್ರಮ ನೀಡಿದ ಎಲ್ಲ ಮಕ್ಕಳಿಗೆ ಉತ್ಸವ ಸಮಿತಿಯಿಂದ ಕಾಣಿಕೆಗಳನ್ನು ನೀಡಿ ಗೌರವಿಸಿದರು.

ದ್ಯಾಮವ್ವ ತಾಯಿ ಎಲ್ಲರನ್ನೂ ಸಲಹುವ ದೇವತೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಹಿಳೆ ಎಂದಿಗೂ ಅಬಲೆಯಲ್ಲ. ಆಕೆ ಸಬಲೆ. ಎಲ್ಲ ಶಕ್ತಿಯನ್ನೂ ತನ್ನಲ್ಲಿ ಹೊಂದಿರುವ ಆಕೆ ಕುಟುಂಬವನ್ನು ಸಮರ್ಥವಾಗಿ ನಿರ್ವಹಿಸುವ ಶಕ್ತಿಯನ್ನು ಹೊಂದಿದ್ದಾಳೆ ಎಂದು ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿಹೇಳಿದರು.

ಪಟ್ಟಣದಲ್ಲಿ ನಡೆದಿರುವ ಶ್ರೀ ದ್ಯಾಮವ್ವ ದೇವತೆಯ ಜಾತ್ರಾ ಮಹೋತ್ಸವದಲ್ಲಿ ಅವರು 'ಶಕ್ತಿ ಮಾತೆ ಮತ್ತು ಮಹಿಳೆ' ವಿಷಯದ ಕುರಿತು ಮಾತಾಡಿದರು.

ಗ್ರಾಮ ದೇವತೆ ದ್ಯಾಮವ್ವ ತಾಯಿ ಎಲ್ಲರನ್ನೂ ಸಲಹುವ ದೇವತೆಯಾಗಿದ್ದಾಳೆ. ಅವಳ ಆರಾಧನೆಯಿಂದ ಸಂಪ್ರೀತಳಾಗಿ ಕಾಲಕಾಲಕ್ಕೆ ಮಳೆ-ಬೆಳೆಗಳನ್ನು ನೀಡಿ, ನಮ್ಮನ್ನು ಕಾಳಜಿಯಿಂದ ಸಲಹುತ್ತಾಳೆ. ಆದ್ದರಿಂದ ಅವಳ ಪೂಜೆ, ಜಾತ್ರೆ, ಉತ್ಸವ ಎಲ್ಲವೂ ಅಂದುಕೊಂಡಂತೆ ನಡೆಯುತ್ತಿರುವುದು ಸರ್ವರಿಗೂ ಸಂತೋಷವನ್ನುಂಟುಮಾಡಿದೆ ಎಂದು ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ದೇವಿ ಜಾತ್ರೆಯ ಇನ್ನುಳಿದ ದಿನಗಳ ಕಾರ್ಯಕ್ರಮಗಳ ಬಗ್ಗೆ ವಿವರಣೆ ನೀಡಿದರು. ಐದು ವರ್ಷಕ್ಕೊಮ್ಮೆ ನಡೆಯುವ ಈ ಜಾತ್ರೆಯಲ್ಲಿ ಎಲ್ಲರೂ ಉತ್ಸಾಹದಿಂದ ಪಾಲ್ಗೊಂಡು ಶ್ರೀದೇವಿಯ ಜಾತ್ರೆಯನ್ನು ಅತ್ಯಂತ ವೈಭವದಿಂದ ಮುನ್ನಡೆಸಬೇಕೆಂದು ತಿಳಿಸಿದರು.

ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷೆ ಬಸಮ್ಮ ಲಕ್ಕನಗೌಡ್ರ ಅಧ್ಯಕ್ಷತೆ ವಹಿಸಿದ್ದರು. ಸುಮಾ ಹೊಟ್ಟಿನ ಸ್ವಾಗತಿಸಿದರು. ಅರ್ಚನಾ ಕುಲಕರ್ಣಿ ನಿರೂಪಿಸಿದರು. ರಾಧಿಕಾ ಕಳಕಣ್ಣವರ ವಂದಿಸಿದರು.

ಕೆ.ಎಲ್.ಇ ಸಂಸ್ಥೆಯ ಜ. ತೋಂಟದಾರ್ಯ ಮಹಾವಿದ್ಯಾಲಯದಲ್ಲಿ ಆಡಳಿತ ಮಂಡಳಿ ಸಭೆ

ಕಾಲೇಜಿನ ಬೆಳವಣಿಗೆಗೆ ಸಿದ್ಧಲಿಂಗ ಶ್ರೀಗಳ ಆಶೀರ್ವಾದ ಕಾರಣ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಮಾಲಯ ಸದೃಶ ವ್ಯಕ್ತಿತ್ವ ಹೊಂದಿದ್ದ ತೋಂಟದ ಸಿದ್ಧಲಿಂಗ ಶ್ರೀಗಳ ಅಗಲಿಕೆಯಿಂದ ನಾಡಿಗೆ ತುಂಬಲಾರದ ಹಾನಿ ಉಂಟಾಗಿದೆ. ಶ್ರೀಗಳು ಕನ್ನಡ ನಾಡು-ನುಡಿ, ಸಾಹಿತ್ಯ, ಪುಸ್ತಕ ಸಂಸ್ಕೃತಿ ಮತ್ತು ಶೈಕ್ಷಣಿಕ ರಂಗದಲ್ಲಿ ಶ್ರೇಷ್ಠ ಸಾಧನೆ ಮಾಡಿದ್ದಾರೆ. ಆ. ತೋಂಟ-ದಾರ್ಯ ಮಠದ ಹೆಸರನ್ನು ಬಾನೆತ್ತರಕ್ಕೆ ಬೆಳೆಸಿದ ಪೂಜ್ಯರ ಸ್ಮರಣೆಗಾಗಿ ಜಗದ್ಗುರು ತೋಂಟದಾರ್ಯ ಮಠದವರು ಅಥವಾ ಭಕ್ತರು ಗದಗ ಇಲ್ಲವೇ ಕುಕನೂರಿನಲ್ಲಿ ಜಮೀನು ದಾನ ನೀಡಿದರೆ ಪೂಜ್ಯರ ಹೆಸರಿನಲ್ಲಿ ಕೆ.ಎಲ್.ಇ ಸಂಸ್ಥೆ ವತಿಯಿಂದ ಕಾಲೇಜು ಪ್ರಾರಂಭಿಸಲಾಗುವುದು ಎಂದು ಕೆ.ಎಲ್.ಇ ಸಂಸ್ಥೆಯ ಕಾರ್ಯಾಧ್ಯಕ್ಷ ಪ್ರಭಾಕರ ಕೋರೆ ನುಡಿದರು.

ಅವರು ನಗರದ ಕೆ.ಎಲ್.ಇ ಸಂಸ್ಥೆಯ ಜ. ತೋಂಟದಾರ್ಯ ಮಹಾವಿದ್ಯಾಲಯದಲ್ಲಿ ನಡೆದ ಆಡಳಿತ ಮಂಡಳಿ ಸಭೆಯಲ್ಲಿ ಮಾತನಾಡಿ, ಗದುಗಿನ ಜೆ.ಟಿ. ಕಾಲೇಜು ನಮ್ಮ ಕೆ.ಎಲ್.ಇ ಸಂಸ್ಥೆಯ ಅಂಗ ಸಂಸ್ಥೆಗಳಲ್ಲಿ 35 ಎಕರೆ ವಿಶಾಲವಾದ ಜಮೀನು ಹಾಗೂ ಭವ್ಯ ಕಟ್ಟಡಗಳನ್ನು ಹೊಂದಿದ ವಿಶೇಷ ಕಾಲೇಜಾಗಿದೆ. ಈ ಕಾಲೇಜಿನ ಬೆಳವಣಿಗೆಗೆ ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಆಶೀರ್ವಾದವೂ ಕಾರಣ. ಶ್ರೀಗಳ ಅಪೇಕ್ಷೆಯಂತೆ ಗದುಗಿನಲ್ಲಿ ಕೆ.ಎಲ್.ಇ ಸಂಸ್ಥೆಯಿಂದ ಅಕ್ಕಮಹಾದೇವಿ ಮಹಿಳಾ ಕಾಲೇಜನ್ನು ಪ್ರಾರಂಭಿಸಲಾಯಿತು. ಅದಕ್ಕೆ ಪ್ರತ್ಯೇಕ ಜಮೀನು ಲಭ್ಯವಾಗದ ಕಾರಣ ಆ ಕಾಲೇಜನ್ನು ಕೋ-ಎಜುಕೇಶನ್ ಕಾಲೇಜನ್ನಾಗಿ ಪರಿವರ್ತಿಸಿದ ಇತಿಹಾಸ ಪಟ್ಟಣಶೆಟ್ಟರಿಗೆ ಗೊತ್ತಿರುವ ಸಂಗತಿ ಎಂದು ನೆನಪಿಸಿಕೊಂಡರು.

> ಸಭೆಯಲ್ಲಿ ಉಪಸ್ಥಿತರಿದ್ದ ಎಚ್.ವೈ. ದೇಸಾಯಿಗೌಡರ ಗದಗ ನಗರದಲ್ಲಿ ಸುಸಜ್ಜಿತ ವಸತಿ ಶಾಲೆಯನ್ನು ನಿರ್ಮಿಸುವಂತೆ, ಎಸ್.ಎಸ್ ಪಟ್ಟಣಶೆಟ್ಟರು ಕೆ.ಎಲ್.ಇ ಸಂಸ್ಥೆಯಿಂದ ವಿವಿಧ ವಿಷಯಗಳ ಸ್ನಾತಕೋತ್ತರ ಕೋರ್ಸ್‌ಗಳನ್ನು ಆರಂಭಿಸುವಂತೆ ಮತ್ತು ಡಾ.ಪವಾಡಶೆಟ್ಟರು

ಪೂರಕ ಅಂದಾಜು ವೆಚ್ಚಗಳಿಗೆ ವಿಧಾನಸಭೆ ಅಂಗೀಕಾರ

▶▶ ಮೊದಲನೇ ಪುಟದಿಂದ

ಇದಕ್ಕೆ ಸಂವಿಧಾನದ 205(1)(ಎ) ಅನುಚ್ಛೇದ ಅವಕಾಶ ಕಲ್ಪಿಸಿದೆ. ಈಗ ಮಂಡಿಸಿದ ಪೂರಕ ಅಂದಾಜಿನ ಗಾತ್ರ 2023-24ರ ಆಯವ್ಯಯದ ಶೇ.1ರಷ್ಟು ಮಾತ್ರ ಎಂದರು.

ಮೊದಲನೇ ಪೂರಕ ಅಂದಾಜಿನಲ್ಲಿ ಒದಗಿಸಿರುವ ಒಟ್ಟು ಮೊತ್ತ ರೂ.3542.10 ಕೋಟಿಯಲ್ಲಿ ರೂ.17.66 ಕೋಟಿ ಪ್ರಭೃತ ವೆಚ್ಚ ಮತ್ತು ರೂ.3524.44 ಕೋಟಿ ಪುರಸ್ಕೃತ ವೆಚ್ಚಗಳು ಸೇರಿವೆ. ಇದರಲ್ಲಿ ರೂ.326.98 ಕೋಟಿ ರಿಸರ್ವ್ ಫಂಡ್ ಠೇವಣಿ ಹಾಗೂ ಎಸ್ಎನ್ಎ ಖಾತೆಗಳಿಂದ ಭರಿಸಲಾಗುವುದು. ರೂ.684.28 ಕೋಟಿ ಕೇಂದ್ರ ಸರ್ಕಾರ ಸಹಾಯಕ್ಕೆ ಸಂಬಂಧಿಸಿವೆ ಎಂದರು.

ಪೂರಕ ಅಂದಾಜಿನಲ್ಲಿ ರೂ.915 ಕೋಟಿ ಬಂಡವಾಳ ವೆಚ್ಚವಾಗಿ ಅಭಿವೃದ್ಧಿ ಕಾರ್ಯಗಳಿಗೆ ವ್ಯಯಿಸಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಎಸ್ಇಪಿ ಹಾಗೂ ಟಿಎಸ್ಪಿ ಯೋಜನಗೆ ರೂ.508 ಕೋಟಿ, ರಾಜ್ಯ ವಿಪತ್ತು ನಿರ್ವಹಣೆ ಪ್ರಾಧಿಕಾರಕ್ಕೆ ರೂ.502 ಕೋಟಿ, ಸಮಗ್ರ ಶಿಶು ಅಭಿವೃದ್ಧಿ ಯೋಜನೆಗೆ ರೂ.310 ಕೋಟಿ, ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯ ಸಾಗಾಣಿಕೆ ವೆಚ್ಚಗಳಿಗೆ ರೂ.297 ಕೋಟಿ, ಎಸ್.ಸಿ.ಡಿ.ಎಸ್‌ಗೆ ರೂ.284 ಕೋಟಿ, ಉಗ್ರಾಣ ನಿಗಮಕ್ಕೆ ಸಾಲವಾಗಿ ರೂ.229 ಕೋಟಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಆರೋಗ್ಯ ಕ್ಷೇಮ ಕೇಂದ್ರಗಳಾಗಿ ಮೇಲ್ದರ್ಜೆಗೆ ಏರಿಸಲು ರೂ.189 ಕೋಟಿ, ನಬಾರ್ಡ್ ರಸ್ತೆಗಳಿಗೆ ರೂ.150 ಕೋಟಿ, ಕೇಂದ್ರದ ಇ-ಲೈಬ್ರರಿ ಯೋಜನೆಗೆ ರಾಜ್ಯದ ಪಾಲಾಗಿ ರೂ.132 ಕೋಟಿ, ಕೃಷಿ ಭಾಗ್ಯ ಯೋಜನೆಗೆ ರೂ.100 ಕೋಟಿ ಸೇರಿದಂತೆ ತೋಟಗಾರಿಕೆ, ಪಶುಸಂಗೋಪನೆ ಮತ್ತು ಮೀನುಗಾರಿಕೆ, ಕಂದಾಯ, ಶಿಕ್ಷಣ, ಆಹಾರ ಮತ್ತು ನಾಗರಿಕ ಸರಬರಾಜು, ವಾಣಿಜ್ಯ ಮತ್ತು ಕೈಗಾರಿಕೆ, ನಗರಾಭಿವೃದ್ಧಿ ಮತ್ತು ವಸತಿ, ಲೋಕೋಪಯೋಗಿ, ನೀರಾವರಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಆರ್ಥಿಕ ಇಲಾಖೆಗಳಿಗೆ ಅನುದಾನ ಒದಗಿಸಲಾಗಿದೆ ಎಂದು ಮುಖ್ಯಮಂತ್ರಿಗಳು ಮಾಹಿತಿ ನೀಡಿದರು.

ಚರ್ಚೆಯ ನಂತರ ಸದನದಲ್ಲಿ ಪೂರಕ ಅಂದಾಜು ಹಾಗೂ ಧನವಿನಿಯೋಗ ವಿಧೇಯಕಕ್ಕೆ ಅನುಮೋದನೆ

ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಸ್ಥಾನ ಏರೋನಾಟಿಕ್ಸ್ ಲಿಮಿಟೆಡ್‌ನ ಟ್ರೇನಿಂಗ್ ಸಂಸ್ಥೆ, ಬೆಂಗಳೂರು ಇವರು, ಫಿಟ್ಟರ್, ಟರ್ನರ್, ಮಶಿನಿಷ್ಟ್, ಇಲೆಕ್ಟ್ರಿಶೀಯನ್, ವೆಲ್ಡರ್, ಫೌಂಡರಿಮೆನ್, ಕೋಪಾ, ಪೌಂಡರಿಮೆನ್ ಹಾಗೂ ಶೀಟ್‌ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕ್ಯಾನಿಕ್ ಆರ್&ಎಸಿ, ಟೂಲ್&ಡೈ ಮೇಕರ್, ಅಡ್ವಾನ್ಸ್ ಸಿಎನ್‌ಸಿ ಮಷಿನಿಂಗ್, ಐ.ಟಿ.ಐ. ಟ್ರೇಡಗಳಲ್ಲಿ ತೇರ್ಗಡೆಯಾದ ಅರ್ಹ ಅಭ್ಯರ್ಥಿಗಳಿಂದ ಒಂದು ವರ್ಷದ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿಯನ್ನು ಆಹ್ವಾನಿಸಿಸಲಾಗಿದೆ.

ಜಿಲ್ಲೆಯ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ www.apprenticeshipindia.org/candidate-registration ನಲ್ಲಿ ಮೊದಲು ನೋಂದಣಿಯನ್ನು ಮಾಡಿ, ಅಪ್ರೆಂಟಿಸ್ ನೋಂದಣಿ ಸಂಖ್ಯೆಯೊಂದಿಗೆ ಉದ್ಯೋಗ ವಿನಿಮಯ ಕಚೇರಿಯಲ್ಲಿ ಖುದ್ದಾಗಿ ಭೇಟಿ ನೀಡಿ, ನಿಗದಿತ ನಮೂನೆಯ ಅರ್ಜಿಯನ್ನು ಪಡೆದು, ಭರ್ತಿ ಮಾಡಿ, ಸ್ವಧೃಢೀಕೃತ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮತ್ತು ರಾಷ್ಟ್ರೀಯ ವೃತ್ತಿ ತರಬೇತಿ ಕೌನ್ಸಿಲ್‌ನಿಂದ ಅಂಗೀಕೃತವಾದ ಸಂಸ್ಥೆಯಿಂದ ಪಡೆದ ಐ.ಟಿ.ಐ. ಎನ್.ಸಿ.ವಿ.ಟಿ. ಪ್ರಮಾಣ ಪತ್ರ ಮತ್ತು ಅಂಕಪಟ್ಟಿಗಳು, ಜಾತಿ ಪ್ರಮಾಣಪತ್ರ, ಪಿ.ಎಚ್, ಆರ್ಮಡ್ ಪರ್ಸನಲ್, ಆಧಾರ್ ಕಾರ್ಡ್ ಪ್ರತಿ , ಪ್ಯಾನ್ ಕಾರ್ಡ್ ಪ್ರತಿ, ಆನ್‌ಲೈನ್ ಅಪ್ರೆಂಟಿಸ್ ನೋಂದಣಿ ಪ್ರತಿ ಹಾಗೂ ಇತ್ತೀಚಿನ ಎರಡು ಪಾಸ್‌ಪೋರ್ಟ್ ಸೈಜ್ ಫೋಟೊಗಳೊಂದಿಗೆ ಡಿಸೆಂಬರ್ 26 ರೊಳಗಾಗಿ ಸಲ್ಲಿಸಬಹುದಾಗಿದೆ.

ಜಿಲ್ಲೆಯ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 08372220609 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಪ್ರಕಟಣೆ ತಿಳಿಸಿದೆ.

ಬೆಳಗಾವಿಯಲ್ಲಿ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರ ಸಿದ್ದ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬೆಳಗಾವಿ ತಾಲೂಕಿನಲ್ಲಿ ಯಳ್ಳೂರು ಗ್ರಾಮದ ಬಳಿಯ ಸರ್ಕಾರಿ ಜಾಗದಲ್ಲಿ, ಸುಸಜ್ಜಿತ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರ ಸಿದ್ದವಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಬಿ.ನಾಗೇಂದ್ರ ಹೇಳಿದರು.

ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಬುಧವಾರ ವಿಧಾನಸಭೆ ಕಲಾಪದ ಪ್ರಶ್ನೋತ್ತರ ವೇಳೆ ಶಾಸಕ ಅಭಯ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಒದಗಿಸುವ ಅನುದಾನದ ಜೊತೆ ರಾಜ್ಯ ಸರ್ಕಾರವು ಅನುದಾನ ನೀಡಿ ಕ್ರೀಡಾಂಗಣ ನಿರ್ಮಿಸಲು ಯಾವುದೆ ಅಡ್ಡಿಯಿಲ್ಲ. ಯಳ್ಳೂರು ಗ್ರಾಮದ ರಿ.ಸ.ನಂ 1142ರ 66 ಎಕರೆ ಪೈಕಿ 40 ಎಕರೆ ಜಮೀನು ಕ್ರೀಡಾ ಇಲಾಖೆ ಹಸ್ತಾಂತರವಾಗಿದೆ. ಪಾರ್ಕಿಂಗ್ ಒಳಗೊಂಡಂತೆ ಸುಸಜ್ಜಿತ ಕ್ರೀಡಾಂಗಣ ನಿರ್ಮಿಸಲು ಕನಿಷ್ಠ 55 ಎಕರೆ ಜಮೀನಿ ಅವಶ್ಯಕತೆಯಿದೆ. ಈಗಾಗಲೇ ಜಮೀನು ಹಸ್ತಾಂತರ ಪ್ರಕ್ರಿಯೆ ಸಲುವಾಗಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ 11 ಅಧಿಕಾರಿಗಳ ಸಮಿತಿ ರಚನೆ ಮಾಡಲಾಗಿದೆ. ಸ್ಥಳೀಯ ಶಾಸಕರು ಅವಶ್ಯ ಇರುವ 15 ಎಕರೆ ಜಮೀನು ಒದಗಿಸಿದರೆ ಶೀಘ್ರವಾಗಿ ಕ್ರೀಡಾಂಗಣ ನಿರ್ಮಾಣದ ಯೋಜನೆ ರೂಪಿಸಲಾಗುವುದು ಎಂದು ಸಚಿವ ಬಿ.ನಾಗೇಂದ್ರ ಹೇಳಿದರು.

ಸದ್ಯ ಸರ್ಕಾರಿ ಜಮೀನನಲ್ಲಿ ನಿರ್ಮಾಣವಾಗಿರುವ ಶಾಲೆ ಹಾಗೂ ಸರ್ಕಾರದ ಯೋಜನೆಗಳಲ್ಲಿ ಬಡವರಿಗೆ ವಿತರಿಸಲಾಗಿರುವ ಮನೆಗಳನ್ನು ಹೊರತು ಪಡಿಸಿ ಉಳಿದ ಖಾಲಿ ಜಾಗವನ್ನು ಕ್ರೀಡಾ ಇಲಾಖೆಗೆ ಹಸ್ತಾಂತರಿಸಲಾಗುವುದು. ಇದಕ್ಕೆ ಜನರ ವಿರೋಧವಿಲ್ಲ ಎಂದು ಶಾಸಕ ಅಭಯ ಪಾಟೀಲ್ ಹೇಳಿದರು.

ತಿಂಗಳ ಒಳಗಾಗಿ ವಿದ್ಯಾರ್ಥಿ ನಿಲಯ ಮಂಜೂರಾತಿ ಹೊಸಕೋಟೆಯಲ್ಲಿ ಮೆಟ್ರಿಕ್ ನಂತರ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿನಿಲಯ ನಿರ್ಮಾಣಕ್ಕೆ ಅಗತ್ಯ ಇರುವ 10000 ಚದುರ ಅಡಿ ಜಾಗವನ್ನು ಒದಗಿಸಿದರೆ, ತಿಂಗಳ ಒಳಗಾಗಿ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಮಂಜೂರಾತಿ ನೀಡುವುದಾಗಿ ಸಚಿವ ಬಿ.ನಾಗೇಂದ್ರ ಶಾಸಕ ಶರತ್ ಬಚ್ಚೇಗೌಡ ಅವರ ಪ್ರಶ್ನೆಗೆ ಉತ್ತರಿಸಿದರು.

ತಾಲೂಕಾ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವಕ್ಕೆ ಚಾಲನೆ

ಮಕ್ಕಳ ಪ್ರತಿಭೆ ಅನಾವರಣಕ್ಕೆ ಪ್ರತಿಭಾ ಕಾರಂಜಿ ಸೂಕ್ತ ವೇದಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಸೃಜನಶೀಲ ವ್ಯಕ್ತಿತ್ವದ ಪುಷ್ಪಗಳು. ಮುಗ್ಧ ಮಕ್ಕಳ ಮನಸ್ಸಿನ ಭಾವನೆಗಳಿಗೆ ಅಭಿವ್ಯಕ್ತಿಯ ರೂಪ ನೀಡಿ, ಅವರನ್ನು ಸೃಜನತೆಯ ಕಡೆ ಕರೆದೊಯ್ಯುವ ವೇದಿಕೆಯೇ ಪ್ರತಿಭಾ ಕಾರಂಜಿ ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೆಶಕ ಎಂ.ಎ. ರಡ್ಡೇರ ಹೇಳಿದರು.

ಅವರು ಬುಧವಾರ ಬೆಟಗೇರಿಯ ಸೈಂಟ್ ಜಾನ್ಸ್ ಶಾಲೆಯ ಆವರಣದಲ್ಲಿ ಜಿ.ಪಂ ಗದಗ, ಶಾಲಾ ಶಿಕ್ಷಣ ಇಲಾಖೆ ಗದಗ, ತಾ.ಪಂ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಗದಗ ಶಹರ ವಲಯದಿಂದ ಏರ್ಪಡಿಸಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳ ತಾಲೂಕಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲಾ ಡಯಟ್ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ ಮಾತನಾಡಿ, ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಪ್ರತಿಭಾ ಕಾರಂಜಿ ವೇದಿಕೆ ನಿರ್ಣಾಯಕ ಪಾತ್ರ ವಹಿಸುತ್ತದೆ. ಮಕ್ಕಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲೂ ತಮ್ಮ ಪ್ರತಿಭೆಯನ್ನು ಅಭಿವ್ಯಕ್ತಗೊಳಿಸಿ, ಅಭಿವೃದ್ಧಿ ಸಾಧಿಸಬೇಕು ಎಂದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಾಥಮಿಕ ಹಂತದಲ್ಲೇ ಮಕ್ಕಳಲ್ಲಿ ಕಲೆ, ಸಾಹಿತ್ಯದ ಅಭಿರುಚಿಯೊಂದಿಗೆ ಸ್ಪರ್ಧಾತ್ಮಕ ಮನೋಭಾವ ಬೆಳೆದು ಬರುವಲ್ಲಿ ಈ ವೇದಿಕೆ ಮೆಟ್ಟಿಲಾಗಿ ಸ್ಫೂರ್ತಿ ತುಂಬುವಂತಾಗಲಿ ಎಂದು ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಕ್ಕಳಾದ ಗಂಗಾಧರ ಸಾತೆ, ವಿಶ್ವನಾಥ ಹುನಗುಂದ, ಸಮನ್ವಿತ ದೊಟವಾಡ ಇವರನ್ನು ಶಿಕ್ಷಕರ ಸಂಘಟನೆಯಿಂದ ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು.

ಡಿವೈಪಿಸಿ ಎಂ.ಎಚ್. ಕಂಬಳಿ, ಸಮನ್ವಯ ಅಧಿಕಾರಿ ಎಚ್.ಎ. ಫಾರೂಖಿ, ಫಾದರ್ ಜೇಕಬ್ ಅಂಟೋನಿ, ಫಾದರ್ ರಾಚಪ್ಪ ಅರುಳಪ್ಪ, ಮುಖ್ಯೋಪಾಧ್ಯಾಯೆ ಮೇರಿ ಮಸ್ಕರೇನಸ್, ತಾ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್. ಜಿನಗಾ, ನಗರಸಭಾ ಸದಸ್ಯ ಚಂದ್ರು ಕರಿಸೋಮನಗೌಡ್ರ, ಶಿಕ್ಷಕರ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

> ಮಕ್ಕಳಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಪ್ರತಿಭಾ ಕಾರಂಜಿ ಸೂಕ್ತ ವೇದಿಕೆಯಾಗಿದ್ದು, ಇಲ್ಲಿ ನಿರ್ಣಾಯಕರ ಪಾತ್ರ ಮಹತ್ವದ್ದಾಗಿದೆ ಎಂದರಲ್ಲದೆ, ಮಕ್ಕಳಲ್ಲಿರುವ ಉತ್ಸಾಹ ಚಿಮ್ಮಿ ಪ್ರತಿಭಾ ಕಾರಂಜಿ ಸಂತಸದಾಯಕವಾಗಿರಲಿ ಎಂದು ಎಂ.ಎ. ರಡ್ಡೇರ ಆಶಿಸಿದರು.

ಸೈಂಟ್ ಜಾನ್ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಬಿಇಓ ಆರ್.ಎಸ್. ಬುರಡಿ ಸ್ವಾಗತಿಸಿದರು.

ಸುಮಾ ಹಚಡದ, ಪ್ರಕಾಶ ಮಂಗಳೂರ ನಿರೂಪಿಸಿದರು. ಶ್ಯಾಮ್ ಲಾಂಡೆ ವಂದಿಸಿದರು. ಕಾರ್ಯಕ್ರಮದಲ್ಲಿ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.

ಎಸ್.ಬಿ. ನಗರದಲ್ಲಿ ಸಂಭ್ರಮದ ಕಾರ್ತಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನಲ್ಲಿ ಹುದುಗಿರುವ ದುರ್ಗುಣಗಳನ್ನು ದೂರೀಕರಿಸಿ ಸದ್ಗುಣಗಳತ್ತ ಕೊಂಡೊಯ್ಯುವ ದೀಪ ಬೆಳಗುವ ಹಬ್ಬವನ್ನು ಕಾರ್ತಿಕೋತ್ಸವ ಎಂದು ಹೇಳಲಾಗುತ್ತದೆ. ಕತ್ತಲೆಯನ್ನು ದೂರ ಮಾಡಿ ಬೆಳಕಿನತ್ತ ದಾಪುಗಾಲು ಹಾಕುವ ಪ್ರತೀಕವೇ ಕಾರ್ತಿಕೋತ್ಸವ. ಇಂತಹ ಜ್ಯೋತಿ ಬೆಳಗುವ ಹಬ್ಬಗಳನ್ನು ಪುರಾತನ ಕಾಲದಿಂದಲೂ ಆಚರಿಸುವ ಸಂಪ್ರದಾಯ ನಮ್ಮ ಭಾರತೀಯರದ್ದಾಗಿದೆ. ಅದಕ್ಕೆಂದೇ ಇತರ ದೇಶಗಳ ಸಂಸ್ಕೃತಿಗಿಂತ ನಮ್ಮ ದೇಶದ ಸಂಸ್ಕೃತಿ ಸಂಪ್ರದಾಯ ಮಾದರಿಯಾಗಿದೆ ಎಂದು ಮುಕ್ಕಣ್ಣೇಶ್ವರ ಮಠದ ಶ್ರೀ ಶಂಕರಾನಂದ ಮಹಾಸ್ವಾಮಿಗಳು ನುಡಿದರು.

ಅವರು ಇಲ್ಲಿನ ಶಿವಬಸವ ನಗರದ ಶಿವಬಸವ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಕಾರ್ತಿಕೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಶಿವಬಸವ ನಗರದ ಸುಧಾರಣಾ ಸಮಿತಿಯವರು ಇತ್ತೀಚಿಗೆ ಇಂತಹ ಧಾರ್ಮಿಕ ಹಬ್ಬಗಳನ್ನು ಆಚರಿಸುವ ಮೂಲಕ ಇಡೀ ಬಡಾವಣೆಯಲ್ಲಿ ಒಮ್ಮತ, ಒಗ್ಗಟ್ಟು ಮೂಡಿಸಿರುವುದನ್ನು ಶ್ಲಾಘನೀಯ ಎಂದರು.

ಸಮಾರಂಭದಲ್ಲಿ ಶಿವಬಸವ ಸುಧಾರಣಾ ಸಮಿತಿ ರೂವಾರಿಗಳು, ಗೌರವಾಧ್ಯಕ್ಷ ಎಂ.ಟಿ. ಸೂರಿ ಸ್ವಾಗತಿಸಿದರು. ಸಮಿತಿಯ ನೂತನ ಅಧ್ಯಕ್ಷ, ನ್ಯಾಯವಾದಿ ಶಿವಶಂಕರ ಕೋತಂಬರಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಸಮಿತಿಯ ಕಾರ್ಯದರ್ಶಿ ಶಿದ್ರಾಮಶೆಟ್ಟಿ, ರಾಮಣ್ಣ ಮಡಿವಾಳರ, ನಗರಸಭೆ ಸದಸ್ಯೆ ಸವಿತಾ ದಂಡಿನ, ನ್ಯಾಯವಾದಿಗಳಾದ ಶಿವರಾಮ ಕೊಳ್ಳಿ, ಪುರುಷೋತ್ತಮ ಇನಾಮದಾರ, ಬಸವರಾಜ ಚೌಡಕಿ, ವಿಜಯ ಮಹಾಂತೇಶ ಹೊಸಮಠ, ಪ್ರಭು ಜಾಲಿಹಾಳ, ಐ.ಕೆ. ಕಮ್ಮಾರ, ಶ್ರೀನಿವಾಸ ಮೆಣಸಗಿ, ಬಿ.ಸಿ. ಇಲಕಲ್ಲ, ಶಿವರಾಜ ಚಳಗೇರಿ, ಎಸ್.ಪಿ. ಹಿರೇಮಠ, ಬಿ.ಬಿ. ಹಡಪದ, ಸಂಗಪ್ಪ ಸೇರಿದಂತೆ ಬಡಾವಣೆಯ ನೂರಾರು ಮಹಿಳೆಯರು ಪಾಲ್ಗೊಂಡಿದ್ದರು. ಬೆಳಿಗ್ಗೆ ಗಡ್ಡದಮಠ ಅವರಿಂದ ರುದ್ರಾಭೀಷೇಕ, ವಿಶೇಷ ಪೂಜೆ ಜರುಗಿತು.

ಕಲಾ ತಂಡದವರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ನಗರದ ಟರ್ನಲ್ ಪೇಟೆಯಲ್ಲಿರುವ ಶ್ರೀ ಮಂಜುನಾಥ ದೇವಸ್ಥಾನ ಟ್ರಸ್ಟ್ ವತಿಯಿಂದ ನಡೆಯುತ್ತಿರುವ ಶ್ರೀ ಮಂಜುನಾಥ ಸ್ವಾಮಿ ದೇವಸ್ಥಾನದ 40ನೇ ವರುಷದ ಕಾರ್ತಿಕ ಮಾಸದ ದೀಪೋತ್ಸವದ ಹಿನ್ನೆಲೆಯಲ್ಲಿ ಹಿರೇಮಣ್ಣೂರಿನ ಶ್ರೀ ಗಜಾನನ ಕಲಾ ಮಂಡಳಿದವರು ಜಾನಪದ, ಜೋಗುತಿ ನೃತ್ಯ, ಹಾಸ್ಯದ ಮೂಲಕ ನೆರೆದವರನ್ನು ರಂಜಿಸಿದರು.

ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳಾದ ಅಶೋಕ ಮುಳಗುಂದ, ಮಂಜು ಹಾವನೂರ, ಮಂಜುನಾಥ ಎಸ್.ಮುಳಗುಂದ, ಶಂಕರ ಮುಳಗುಂದ, ಬೂದಪ್ಪ ಹುಣಶೀಮರದ, ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ, ಮಲ್ಲೇಶ ಹುಲಕೋಟಿ, ಚಿದಾನಂದ ಹೊಸಮನಿ, ಅಣ್ಣಪ್ಪ ಗಾರವಾಡ, ಬಸವರಾಜ ಗಾರವಾಡ, ಲಕ್ಷ್ಮಣ ಮುಳಗುಂದ, ಲಕ್ಷ್ಮಣ ದೊಡ್ಡಮನಿ ಸೇರಿದಂತೆ ಮೋಚಿಗಾರ ಸಮುದಾಯ ಬಾಂಧವರು ಕಲಾವಿದ ಶರಣು ನೇತೃತ್ವದ ಕಲಾ ತಂಡವನ್ನ ಸನ್ಮಾನಿಸಿ, ಗೌರವಿಸಿದರು.

ಎನ್‌ಸಿಸಿ ಅಧಿಕಾರಿ ವಸಂತಕುಮಾರಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿಡಿಎಸ್ ಬಾಲಕರ ಪ್ರೌಢಶಾಲೆಯ ಎನ್‌ಸಿಸಿ ಅಧಿಕಾರಿ ವಸಂತಕುಮಾರ ವೀರಾಪುರ ಅವರನ್ನು ಹಾತಲಗೇರಿ ನಾಕಾದಲ್ಲಿರುವ ಜೆ.ಟಿ. ಕಾಲೇಜಿನಲ್ಲಿ ಅವರನ್ನು ಇತ್ತೀಚೆಗೆ ಸನ್ಮಾನಿಸಲಾಯಿತು. ವಸಂತಕುಮಾರ ಹೆಚ್.ವೀರಾಪುರ ಅವರನ್ನು ಸುಭೇದಾರ ಮೇಜರ್ ಮಲ್ಲಪ್ಪ ಬ್ಯಾಳಿ, ಕ್ಯಾಪ್ಟನ್ ಎಸ್.ಬಿ. ಜಾಧವ, ಕ್ಯಾಪ್ಟನ್ ವಸಂತ ಮೂಲಿಮನಿ, ಎಸ್.ಡಿ. ಕರಿಗಾರ, ಬಿ.ಎಸ್. ರಾಠೋಡ, ಜೆಸಿಓ ಗರುಂಗ ಕದಂ, ಶ್ರೀಕಾಂತ ಕರಡಿ ಅವರು ಸನ್ಮಾನಿಸಿ ಶುಭ ಹಾರೈಸಿದರು.

ಕಳೆದ 9 ವರ್ಷಗಳಿಂದ 38 ಕರ್ ಬಿ.ಎನ್. ಎನ್‌ಸಿಸಿ ಗದಗ ವಿಡಿಎಸ್ ಬಾಲಕರ ಪ್ರೌಢಶಾಲೆಯಲ್ಲಿ ಎನ್‌ಸಿಸಿ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. 21 ಫೆಬ್ರವರಿ 2017ರಂದು ಎರಡನೇ ಅಧಿಕಾರಿಯಾಗಿ ಬಡ್ತಿ ಪಡೆದಿದ್ದಾರೆ. ಅವರು ಸ್ವಚ್ಛತಾ ಅಭಿಯಾನ, ಜಾಗೃತಿ ರ್‍ಯಾಲಿಗಳು ಮತ್ತು ಉಪನ್ಯಾಸಗಳಂತಹ ಅನೇಕ ಸಾಮಾಜಿಕ ಚಟುವಟಿಕೆಗಳನ್ನು ನಡೆಸಿದ್ದಾರೆ.

2022ರ ಆಗಸ್ಟ್ 7ರಂದು ಪ್ರಥಮ ಅಧಿಕಾರಿಯಾಗಿ ಬಡ್ತಿ ನೀಡಲಾಗಿದೆ. ಅವರ ಮಾರ್ಗದರ್ಶನದಲ್ಲಿ ಅನೇಕ ವಿದ್ಯಾರ್ಥಿಗಳು ತರಬೇತಿ ಪಡೆದಿದ್ದಾರೆ.

ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಪುರಸಭೆ ವ್ಯಾಪ್ತಿಯಲ್ಲಿ ಬರುವ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ 2023-24ನೇ ಸಾಲಿನ ರಾಷ್ಟ್ರೀಯ ನಗರ ಜೀವನೋಪಾಯ

ಸುಪ್ರೀಂ ಕೋರ್ಟ್ ತೀರ್ಪು ದೇಶದ ಅಸ್ಮಿತೆ ಸಾರಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಭದ್ರತೆ ಹಾಗೂ ಅಖಂಡತೆಯನ್ನು ಕಾಪಾಡುವ ವಿಷಯದಲ್ಲಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಎಂದೂ ರಾಜಿಯಾಗುವುದಿಲ್ಲ ಎಂಬುದು ಮತ್ತೆ ಸಾಬೀತುಪಡಿಸಿದ್ದು, ಕಾಶ್ಮೀರ ವಿಷಯದಲ್ಲಿ ಸುಪ್ರೀಂ ನೀಡಿರುವ ತೀರ್ಪು ದೇಶದ ಅಸ್ಮಿತೆಯನ್ನು ಸಾರಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್‌ನ ತುಷ್ಟೀಕರಣ ಹಾಗೂ ಓಲೈಕೆಯಿಂದ ಜಮ್ಮು-ಕಾಶ್ಮೀರ ವಿಷಯದಲ್ಲಿ ದೃಢ ನಿರ್ಣಯ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ. 370ನೇ ವಿಧಿಯನ್ನು ಅಲ್ಲಿ ಜಾರಿಗೊಳಿಸಿದ್ದರಿಂದ ಅಲ್ಲಿನ ಸಾರ್ವಜನಿಕರು ಹಾಗೂ ಭಾರತೀಯರಿಗೆ ದಶಕಗಳ ಕಾಲ ಇದೊಂದು ಗೊಂದಲದ ಗೂಡಾಗಿತ್ತು. ಪ್ರಧಾನಿ ಮೋದಿಯವರು ಅಧಿಕಾರಕ್ಕೆ ಬಂದ ನಂತರ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ 2019ರಲ್ಲಿ ದೃಢ ನಿರ್ಧಾರ ಪ್ರಕಟಿಸಿ 370ನೇ ವಿಧಿಯನ್ನು ರದ್ದುಮಾಡಿ ಇತಿಹಾಸ ಬರೆದಿದ್ದರು.

ಆದಾಗ್ಯೂ ಕೆಲ ವಿಚ್ಛಿದ್ರಕಾರಿ ಮನಸ್ಸುಗಳು ಈ ನಿರ್ಧಾರವನ್ನು ಪ್ರಶ್ನಿಸಿ ಸುಪ್ರೀಂ ಮೆಟ್ಟಿಲೇರಿದ್ದವು. ಆದರೆ ಸುಪ್ರೀಂ ಕೇಂದ್ರದ ನಿರ್ಣಯವನ್ನು ಎತ್ತಿ ಹಿಡಿಯುವ ಮೂಲಕ ಕಾಂಗ್ರೆಸ್ ಸೇರಿದಂತೆ ವಿಭಜನೆ ಬಯಸುವ ಎಲ್ಲರಿಗೂ ಚಾಟಿ ಏಟು ನೀಡಿದೆ. ದೇಶಕ್ಕೆ ಕಳಸದಂತಿರುವ ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಾಗಿದ್ದು, ಮೋದಿಯವರ ದೃಢ ನಿರ್ಣಯದ ಪರಿಣಾಮವಾಗಿ ಮುಂದೆ ಅಲ್ಲಿನ ಜನ ನೆಮ್ಮದಿಯಿಂದ ಉಸಿರಾಡುವಂತಾಗಿದೆ ಎಂದಿದ್ದಾರೆ.

ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಹೊಸಳ್ಳಿಯ ಬೂದೀಶ್ವರ ಶ್ರೀಗಳು

ಪ್ರಸ್ತುತ ದಿನಗಳಲ್ಲಿ ಶಿಕ್ಷಣ, ಸಂಸ್ಕಾರ ಮಹತ್ವದ್ದಾಗಿದೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಮಕ್ಕಳಿಗೆ ಸರಿಯಾದ ಶಿಕ್ಷಣ ಮತ್ತು ಸಂಸ್ಕಾರ ನೀಡದಿದ್ದರೆ ಮುಂದಿನ ದಿನಗಳಲ್ಲಿ ಮಕ್ಕಳು ತಪ್ಪು ಮಾಡುತ್ತಾರೆ. ಅದಕ್ಕೆ ಪಾಲಕರೇ ಕಾರಣರಾಗುತ್ತಾರೆ ಎಂದು ಹೊಸಳ್ಳಿಯ ಜ. ಅಭಿನವ ಬೂದೀಶ್ವರ ಶ್ರೀಗಳು ಹೇಳಿದರು.

ತಾಲೂಕಿನ ಜಂತ್ಲಿ-ಶಿರೂರ ಗ್ರಾಮದ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ ಶ್ರೀಮಠದಲ್ಲಿ 29ನೇ ವರ್ಷದ ಕಲಬುರ್ಗಿ ಶ್ರೀ ಶರಣಬಸವೇಶ್ವರ ಪುರಾಣ ಮಂಗಲೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ರೈತರಿಗೆ ನಿಜವಾದ ಸಂಪತ್ತು ಎಂದರೆ ಮನೆಯಲ್ಲಿ ದನಗಳ ಸಾಲು, ಕಟ್ಟಿ ಮೆಲೆ ಧವಸ-ಧಾನ್ಯಗಳ ನಿಟ್ಟು, ಅಡುಗೆ ಮನೆಯಲ್ಲಿ ಹಾಲಿನ ಗಡಿಗೆ, ಹಿತ್ತಿನಿನಲ್ಲಿ ಮೇವಿನ ಬಣವಿ, ಹೊಲದೊಳಗೆ ಒಡ್ಡು ಇವುಗಳನ್ನು ನೋಡಿ ರೈತರ ಸಂಪತ್ತನ್ನು ಅಳೆಯುತ್ತಿದ್ದರು. ಈಗ ಕಾಲ ಬದಲಾಗಿ ಎಲ್ಲವೂ ಮಾಯವಾಗಿದೆ ಎಂದು ಹೇಳಿದರು.

ನಂದಿವೇರಿ ಶ್ರೀಮಠದ ಪೂಜ್ಯಶ್ರೀ ಶಿವಕುಮಾರ ಶ್ರೀಗಳು ಮಾತನಾಡಿ, ಅಪರೂಪವಾಗಿರುವ ಮನುಷ್ಯ ಜನ್ಮದಲ್ಲಿ ನಾವು ಜನಿಸಿರುವದರಿಂದ ಮಕ್ಕಳಿಗೆ ಉತ್ತಮ ಶಿಕ್ಷಣ, ಪರಿಸರಪ್ರೇಮ

ಹಾಗೂ ಸಂಸ್ಕಾರ ನೀಡಬೇಕು. ಪಾಲಕರಿಗೆ ಎಷ್ಟೇ ಕಷ್ಟ ಬಂದರೂ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿದರೆ ಅವರು ಸ್ವಾಭಿಮಾನಿಗಳಾಗಿ ಬದಕಲು ಕಲಿಯುತ್ತಾರೆ. ಪಾಲಕರು ಆಸ್ತಿ ಗಳಿಸಲು ಯೋಚಿಸದೆ ಮಕ್ಕಳನ್ನು ಆಸ್ತಿಗಳನ್ನಾಗಿ ಮಾಡಿ. ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಣ ಪ್ರಮುಖ ಪಾತ್ರವಹಿಸುತ್ತದೆ. ಶಾಲೆಗಳು ಶಿಕ್ಷಣ ಕಲಿಸುತ್ತವೆ. ಪಾಲಕರು ಸಂಸ್ಕಾರ ಕಲಿಸಬೇಕು. ಮಕ್ಕಳು ಹೇಳಿದ್ದನ್ನು ಕೇಳುವದಿಲ್ಲ, ಮಾಡಿದ್ದನ್ನು ಕಲಿಯುತ್ತವೆ. ಅದ್ದರಿಂದ ಮನೆಯಿಂದ ಸಂಸ್ಕಾರ ಆರಂಭವಾಬೇಕು. ಇಂದಿನ ದಿನಗಳಲ್ಲಿ ಕೃಷಿ ಉತ್ತಮ, ವ್ಯಾಪಾರ ಮಧ್ಯಮ, ನೌಕರಿ ಕನಿಷ್ಠವಾಗಿದೆ ಎಂದು ಹೇಳಿದರು.

> ಹಿಂದೆ ಹೆಚ್ಚು ವಿದ್ಯಾವಂತರಿದ್ದರೆ ಅವರು ಉನ್ನತ ಹುದ್ದೆ ಪಡೆಯಲಿ ಎಂದು ದೂರದ ಊರಿಗೆ ಕಳುಹಿಸುತ್ತಿದ್ದರು. ಮಧ್ಯಮ ಶಿಕ್ಷಣ ಪಡೆದವರನ್ನು ಕೃಷಿ ಕೆಲಸಕ್ಕೆ ಕಳುಹಿಸುತ್ತಿದ್ದರು. ಆದರೆ, ಈಗ ಕಾಲ ಬದಲಾಗಿದೆ. ಅತೀ ಹೆಚ್ಚು ವಿದ್ಯಾವಂತರಾದವರು ಕೃಷಿಯಲ್ಲಿ ಹೊಸ ಸಾಧನೆಗಳನ್ನು ಮಾಡುತ್ತಿರುವದರಿಂದ ಕೃಷಿಗೆ ಸಾಕಷ್ಟು ಮಹತ್ವ ಬಂದಿದೆ.
>
> – ಜ. ಅಭಿನವ ಬೂದೀಶ್ವರ ಶ್ರೀಗಳು. ಹೊಸಳ್ಳಿ.

ಸುಕ್ಷೇತ್ರ ಬಳಗಾನೂರ, ಜಂತ್ಲಿ ಶಿರೂರಿನ ಪೂಜ್ಯಶ್ರೀ ಶಿವಶಾಂತವೀರ ಶರಣರು ಮಾತನಾಡಿ, ದಾಂಪತ್ಯ ಜೀವನಕ್ಕೆ ಕಾಲಿಟ್ಟ ನೂತನ ದಂಪತಿಗಳು ಗುರು-ಹಿರಿಯರನ್ನು ಗೌರವಿಸಿ ಆದರ್ಶ ಜೀವನ ನಡೆಸಬೇಕು. ಒಂದು ಮನೆಯಿಂದ ಇನ್ನೊಂದು ಮನೆಯ ಬೆಳಕಾಗಿ ಬಂದಿರುವ ಸತಿಯನ್ನು ಕುಟುಂಬದವರು ಮಗಳಿಗಿಂತ ಹೆಚ್ಚಾಗಿ ನೋಡಿಕೊಳ್ಳಬೇಕು ಎಂದು ಹೇಳಿದರು.

ಕಣಗಿನಹಾಳ, ಜಂತ್ಲಿ ಶಿರೂರ ಧರ್ಮರಮಠದ ಪೂಜ್ಯಶ್ರೀ ಧರ್ಮರಾಜ ಅಜ್ಜನವರು, ಯುವ ಮುಖಂಡ ಮಿಥುನ ಪಾಟೀಲ, ವೆಂಕಟೇಶ ಕುಲಕರ್ಣಿ, ಗವಿಸಿದ್ದಯ್ಯ ಹಳ್ಳಿಕೇರಿಮಠ, ಹೇಮಣ್ಣ ಪೂಜಾರ, ಹೊಂಬಳ, ಗ್ರಾ.ಪಂ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ 24 ಜೋಡಿಗಳ ಸಾಮೂಹಿಕ ವಿವಾಹ ಜರುಗಿತು. ತಿಂಗಳವರೆಗೆ ಪುರಾಣ ಪ್ರವಚನ ನೆರವೇರಿಸಿದ ಪ್ರವಚನಕಾರ ಶಿವಲಿಂಗಯ್ಯಶಾಸ್ತ್ರಿ ಹಿರೇಮಠ ಸಿದ್ದಾಪೂರ ಅವರನ್ನು ಸನ್ಮಾನಿಸಲಾಯಿತು.

ಶಿವಣ್ಣ ನಾವಳ್ಳಿ ಕಾರ್ಯಕ್ರಮ ನಿರೂಪಿಸಿದರು. ನಂತರ ನರಗುಂದ ಜೈ ಕಿಸಾನ ಕಲಾ ತಂಡದಿಂದ ಜನಪದ ಜಾತ್ರೆ ಜರುಗಿತು.

ರಾಷ್ಟ್ರೀಯ ಹಿಮಾಲಯ ಯೋಗ ಒಲಂಪಿಯಾಡ್ ಸ್ಪರ್ಧೆಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥೆ (ಡೀಮ್ಡ್ ಯುನಿವರ್ಸಿಟಿ) ಪ್ರಶಾಂತಿ ಕುಟೀರ, ಜಿಗಣಿ-ಬೆಂಗಳೂರು ಇಲ್ಲಿ ಡಿ. 30, 31 ಹಾಗೂ ಜನೇವರಿ 1ರಂದು ರಾಷ್ಟ್ರೀಯ ಹಿಮಾಲಯ ಯೋಗ ಒಲಂಪಿಯಾಡ್ ಸ್ಪರ್ಧೆಗಳು ನಡೆಯಲಿವೆ.

ಸ್ಪರ್ಧಿಯ ವಯೋಮಿತಿಯ ಆಧಾರ (9-14, 15-17, 18-25 ಮತ್ತು 26 ವರ್ಷ ಮೇಲ್ಪಟ್ಟು) ಮೇರೆಗೆ ಒಟ್ಟು ನಾಲ್ಕು ವಿಭಾಗಗಳಲ್ಲಿ ಸ್ತ್ರೀ-ಪುರುಷರಿಗಾಗಿ ಪ್ರತ್ಯೇಕವಾಗಿ ನಡೆಯಲಿವೆ. ಸ್ಪರ್ಧೆಯಲ್ಲಿ ಭಾಗವಹಿಸಿದ ಸ್ಪರ್ಧಿಗಳು ಆಯಾ ವಯೋಮಿತಿ ವಿಭಾಗ-ಕ್ಕೆ ನಿಗದಿಪಡಿಸಿದ ಆಸನ ಕ್ರಿಯೆ, ಪ್ರಾಣಾಯಾಮ, ಬಂಧ, ಮುದ್ರೆ, ಧ್ಯಾನಗಳನ್ನು ನಿಗದಿಗೊಳಿಸಿದ ವೇಳೆಗನುಸಾರ ಪ್ರದರ್ಶಿಸಬೇಕು. ಎಲ್ಲ ವಿಭಾಗದವರಿಗೆ ಸೂರ್ಯ

ನಮಸ್ಕಾರ ಕಡ್ಡಾಯವಾಗಿರುತ್ತದೆ ಮತ್ತು ಯೋಗದ ಮೂಲಭೂತ ಜ್ಞಾನ ಕುರಿತು ಥೇರಿ ಪರೀಕ್ಷೆ ಕೂಡ ನಡೆಯಲಿದೆ.

ಸ್ಪರ್ಧೆಗಳಲ್ಲಿ ಭಾಗವಹಿಸುವವರು ವೈಯಕ್ತಿಕವಾಗಿ ಭಾಗವಹಿಸದೆ ಜಿಲ್ಲಾ/ರಾಜ್ಯ ತಂಡಗಳ ಮೂಲಕ ಭಾಗವಹಿಸಬೇಕು. ಈ ನಿಟ್ಟಿನಲ್ಲಿ ಗದಗ ಜಿಲ್ಲಾ ತಂಡದ ಆಯ್ಕೆ ಪ್ರಕ್ರಿಯೆಯನ್ನು ಡಿ.16ರ ಮುಂಜಾನೆ 10.30ಕ್ಕೆ ಬಸವ ಯೋಗ ಕೇಂದ್ರ (ಬಸವಪ್ರಭೆ ಕ್ಯಾಂಪಸ್) ಸಿದ್ಧಲಿಂಗ ನಗರದಲ್ಲಿ ನಡೆಸಲಾಗುವುದು.

ರಾಷ್ಟ್ರೀಯ ಹಿಮಾಲಯ ಯೋಗ ಒಲಂಪಿಯಾಡ್ ಸ್ಪರ್ಧೆಯಲ್ಲಿ ಭಾಗವಹಿಸಲು ಜಿಲ್ಲಾ ತಂಡದಲ್ಲಿ ಆಯ್ಕೆಯಾಗುವ ಅಪೇಕ್ಷೆಯುಳ್ಳವರು ತಮ್ಮ ಜನ್ಮ ದಿನಾಂಕ ಸೂಚಿಸುವ ಪ್ರಮಾಣಪತ್ರ (ಆಧಾರ್ ಕಾರ್ಡ್/ಎಸ್.ಎಸ್ಎಲ್.ಸಿ. ಅಂಕಪಟ್ಟಿ)ದೊಂದಿಗೆ ಜಿಲ್ಲಾ ತಂಡದ ಆಯ್ಕೆ ಪ್ರಕ್ರಿಯೆ ನಡೆಯುವ ಸ್ಥಳದಲ್ಲಿ ಸಮಯಕ್ಕೆ ಸರಿಯಾಗಿ ಉಪಸ್ಥಿತರಿರಬೇಕು. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದವರಿಗೆ ಮತ್ತು ಆಯ್ಕೆಯಾದ ಅಭ್ಯರ್ಥಿಗಳಿಗೆ ಯಾವುದೇ ರೀತಿಯ ಹಣಕಾಸು ವ್ಯವಸ್ಥೆ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ-9448317188, 9008600504 ಸಂಪರ್ಕಿಸ ಬಹುದು ಎಂದು ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆಯ ಅಧ್ಯಕ್ಷ ಕೆ.ಎಸ್. ಪಲ್ಲೇದ ಮತ್ತು ಕಾರ್ಯದರ್ಶಿ ಚೇತನ ಚುಂಚಾ ವಿನಂತಿಸಿದ್ದಾರೆ.

ಭೂಮರಡ್ಡಿ ಪದವಿ ಕಾಲೇಜು ಚಾಂಪಿಯನ್

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಇತ್ತೀಚೆಗೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಜರುಗಿದ ಬಾಲ್ ಬ್ಯಾಡ್ಮಿಂಟನ್ ಸಿಂಗಲ್ ಚಾಂಪಿಯನ್‌ಶಿಪ್‌ನಲ್ಲಿ ಪಟ್ಟಣದ ಭೂಮರಡ್ಡಿ ಪದವಿ ಕಾಲೇಜು ಪುರುಷರ ತಂಡವು ಸತತ 2ನೇ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಟೂರ್ನಿಯಲ್ಲಿ ಮೊದಲು ಶಿರಸಿಯ ಎಂಇಎಸ್ ಕಾಲೇಜು ತಂಡದ ವಿರುದ್ಧ 35-21, 35-18 ನೇರ ಸೆಟ್‌ಗಳಿಂದ ಗೆಲುವು ಸಾಧಿಸಿತು. ಹುಬ್ಬಳ್ಳಿ ಸರ್ಕಾರಿ ಪದವಿ ಕಾಲೇಜು ತಂಡವನ್ನು 35-18, 35-14 ನೇರ ಸೆಟ್‌ಗಳಿಂದ ಸೋಲಿಸಿತು. ನಂತರ ಧಾರವಾಡದ ಸಿಎಸ್ಇ ವಾಣಿಜ್ಯ ಕಾಲೇಜಿನ ವಿರುದ್ಧ 35-18, 35-23 ನೇರ ಸೆಟ್‌ಗಳಿಂದ ಪರಾಭವಗೊಳಿಸಿ ಫೈನಲ್ ಪಂದ್ಯದಲ್ಲಿ ಶಿರಸಿಯ ಸರ್ಕಾರಿ ಪದವಿ ಕಾಲೇಜಿನ ತಂಡವನ್ನು 35-28, 33-35, 35-18 ಸೆಟ್‌ಗಳಿಂದ ಗೆಲುವು ಸಾಧಿಸುವ ಮೂಲಕ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಟೂರ್ನಿಯಲ್ಲಿ ಮೂದಲ ಬಾರಿಗೆ ಬಾಗವಹಿದ ಭೂಮರಡ್ಡಿ ಪದವಿ ಕಾಲೇಜಿನ ಮಹಿಳಾ ತಂಡವು ರಾಣೆಬೆನ್ನೂರಿನ ಸರ್ಕಾರಿ ಪದವಿ ಕಾಲೇಜಿನ ತಂಡದೊಂದಿಗೆ ಸೆಣಸಿ, 25-18, 25-20 ನೇರ ಸೆಟ್‌ಗಳಿಂದ ಗೆಲುವು ಸಾಧಿಸಿ ತೃತೀಯ ತೃತೀಯ ಸ್ಥಾನ ಗಳಿಸಿದೆ. ಸತತ 2ನೇ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದ ಪುರುಷರ ತಂಡ ಮತ್ತು ತೃತೀಯ ಸ್ಥಾನ ಪಡೆದ ಮಹಿಳಾ ತಂಡಕ್ಕೂ ಸಂಸ್ಥೆಯ ಅಧ್ಯಕ್ಷ ಸಿ.ಸಿ. ಶಿವಪ್ಪಗೌಡರ, ಪದವಿ ಕಾಲೇಜಿನ ಪ್ರಾಂಶುಪಾಲ ಡಾ. ಎಸ್.ಎನ್. ಶಿವರಡ್ಡಿ, ಹಿರಿಯ ಉಪನ್ಯಾಸಕ ಬಿ.ವಿ. ಮುನವಳ್ಳಿ, ದೈಹಿಕ ನಿರ್ದೇಶಕ ಎಲ್.ಕೆ. ವದ್ನಾಳ, ಕ್ರೀಡಾ ವಿಭಾಗದ ಮುಖ್ಯಸ್ಥ ಎಸ್.ಕೆ. ಕಟ್ಟಿಮನಿ, ಉಪನ್ಯಾಸಕ ಎಲ್. ಕೆ. ಹಿರೇಮಠ ಮುಂತಾದವರು ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

ಸಂಸತ್ ಭದ್ರತಾ ಲೋಪ: ಆರು ಆರೋಪಿಗಳ ಬಂಧಿಸಿದ ಪೊಲೀಸರು, 3 ತಿಂಗಳ ತಯಾರಿ!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಸತ್ ದಾಳಿಯ 22ನೇ ವಾರ್ಷಿಕೋತ್ಸವದಂದೆ ಲೋಕಸಭೆಯಲ್ಲಿ ಪ್ರಮುಖ ಭದ್ರತಾ ಲೋಪ ನಡೆದ ಪ್ರಕರಣಕ್ಕೆ ಒಟ್ಟು ಆರು ಆರೋಪಿಗಳನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ.

ಈ ಪ್ರಕರಣ ಸಂಬಂಧ ಮೊದಲು ನಾಲ್ವರನ್ನು ಪೊಲೀಸರು ಬಂಧಿಸಿದ್ದರು. ದೆಹಲಿ ಪೊಲೀಸರು ಪುರುಷ ಮತ್ತು ಮಹಿಳೆ ಇಬ್ಬರನ್ನೂ ಸಂಸತ್ ಭವನದ ಮುಂದೆ ಬಂಧಿಸಿದ್ದರೆ ಮತ್ತಿಬ್ಬರು ಸಂಸತ್ತಿನ ಒಳಗೆ ಬಂಧಿಸಲಾಗಿದೆ ಎಂದು ಡೆಪ್ಯುಟಿ ಕಮಿಷನರ್ ಆಫ್ ಪೊಲೀಸ್ (ನವದೆಹಲಿ) ಪ್ರಣವ್ ತಾಯಲ್ ಖಚಿತಪಡಿಸಿದ್ದಾರೆ.

ಸಂಸತ್ತಿನ ಹೊರಗೆ ಬಂಧಿಸಿದವರನ್ನು ಸಂಸತ್ ಸ್ಟ್ರೀಟ್ ಪೊಲೀಸ್ ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಿದ್ದು ಅವರು ಹರಿಯಾಣದ ಹಿಸಾರ್ ನಿವಾಸಿ ನೀಲಂ (42) ಮತ್ತು ಮಹಾರಾಷ್ಟ್ರದ ಲಾತೂರ್ ನಿವಾಸಿ ಅಮೋಲ್ ಶಿಂಧೆ (25) ಎಂದು ಗುರುತಿಸಲಾಗಿದೆ. ಮತ್ತಿಬ್ಬರನ್ನು ಉತ್ತರ ಪ್ರದೇಶದ ಸಾಗರ್ ಶರ್ಮಾ ಮತ್ತು ಮೈಸೂರಿನ ಮನೋರಂಜನ್ ಎಂದು ತಿಳಿದುಬಂದಿದೆ.

ಸರ್ಕಾರ ಸರ್ವಾಧಿಕಾರಿಯಾಗಿದ್ದು ನಮ್ಮ ಮಾತು ಕೇಳುತ್ತಿಲ್ಲ. ನಿರುದ್ಯೋಗಿಗಳಾಗಿದ್ದೇವೆ. ಅದಕ್ಕಾಗಿಯೇ ನಾವು ಈ ಮಾರ್ಗವನ್ನು ಆರಿಸಿಕೊಂಡಿದ್ದೇವೆ" ಎಂದು ಲೋಕಸಭೆಯಲ್ಲಿಂದು ನಡೆದ ದಾಳಿಯ ಗುಂಪಿನಲ್ಲಿದ್ದ ಯುವತಿ ನೀಲಂ ಹೇಳಿದ್ದಾರೆ. ಆರೋಪಿಗಳು ಗುರುಗ್ರಾಮದಲ್ಲಿ ತಂಗಿದ್ದು ಕಳೆದ ಮೂರು ತಿಂಗಳಿನಿಂದ ತಯಾರಿ ನಡೆಸಿದ್ದರು ಎಂದು ಪೊಲೀಸರ ತನಿಖೆಯಲ್ಲಿ ತಿಳಿದುಬಂದಿದೆ.

ಶ್ರೀ ಬನ್ನಿಮಹಾಂಕಾಳಿ ದೇವಿಯ ಕಾರ್ತಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಅಮರೇಶ್ವರ ನಗರದ ಅಭಿವೃದ್ಧಿ ಸಮಿತಿಯ ಪರವಾಗಿ ಅಮರೇಶ್ವರ ನಗರದ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನದ ಆವರಣದಲ್ಲಿ ಕಾರ್ತಿಕೋತ್ಸವದ ಕಾರ್ಯಕ್ರಮವನ್ನು ಮಂಗಳವಾರ ವಿಜೃಂಭಣೆಯಿಂದ ಆಚರಿಸ ಲಾಯಿತು. ಈ ಸಂದರ್ಭದಲ್ಲಿ ಅಮರೇಶ್ವರ ನಗರ, ವಿಜಯನಗರ, ರಾಚೋಟೇಶ್ವರ ನಗರ, ಗಂಗಿಮಡಿ ನಗರಗಳ ಸದ್ಭಕ್ತರು ಪಾಲ್ಗೊಂಡಿದ್ದರು ಎಂದು ಅಮರೇಶ್ವರ ನಗರ ಅಭಿವೃದ್ಧಿ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಸಾಂಸ್ಕೃತಿಕ ಪರಂಪರೆಯಲ್ಲಿ ಭಾರತವೇ ಶ್ರೇಷ್ಠ

■ ವಿಜಯಸಾಕ್ಷಿ ಸುದ್ದಿ, ಗದಗ

ವೈವಿಧ್ಯಮಯ ರಾಷ್ಟ್ರವಾದ ಭಾರತದಲ್ಲಿ ಸಾಂಸ್ಕೃತಿಕ ಪರಂಪರೆ ಗಟ್ಟಿಯಾಗಿ ಉಳಿದಿದೆ. ಹಾಗಾಗಿಯೇ ನಮ್ಮ ದೇಶ ಉಳಿದೆಲ್ಲ ರಾಷ್ಟ್ರಗಳಿಗಿಂತಲೂ ಮುಂದಿದೆ ಎಂದು ಡಾ. ದತ್ತಪ್ರಸನ್ನ ಪಾಟೀಲ ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಕಾಶೀ ವಿಶ್ವನಾಥ ದೇವಸ್ಥಾನದಲ್ಲಿ ಜರುಗಿದ 'ಜೀವನ ದರ್ಶನ' ಮಾಸಿಕ ಕಾರ್ಯಕ್ರಮ ಹಾಗೂ ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, ಜಗತ್ತಿನಲ್ಲಿ ಭಾರತೀಯ ಪರಂಪರೆಗೆ ಇಂದು ದೊಡ್ಡ ಸ್ಥಾನವಿದೆ. ವಿಶ್ವದ ಎಲ್ಲಾ ಧರ್ಮಗಳನ್ನು ಎತ್ತಿ ಹಿಡಿದಿರುವ ಹಿಂದೂ ಧರ್ಮ, ಸಂಸ್ಕೃತಿ, ಪರಂಪರೆ, ಸವಾಲಿನ ದಿನಗಳನ್ನು ಕಾಣುತ್ತಿದೆ. ಧರ್ಮವು ಅನುಭವದ ಆಧಾರ ಹೊಂದಿದೆಯೇ ಹೊರತು ಪಾಂಡಿತ್ಯದ ಆಧಾರ ಹೊಂದಿಲ್ಲ. ಬುದ್ಧಿಜೀವಿಗಳಿಗೆ ಪಾಂಡಿತ್ಯ ಮುಖ್ಯವೇ ಹೊರತು, ಅನುಭವವಲ್ಲ. ಆದರೆ, ಸಾಮಾನ್ಯರಿಗೆ ಅನುಭವವೇ ಪ್ರಧಾನ, ಪಾಂಡಿತ್ಯವಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೊ. ಎಂ.ಎನ್. ಕಾಮನಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಶಕ್ತಿಯೇ ಜೀವನ, ದೌರ್ಬಲ್ಯವೇ ಮರಣ ಎನ್ನುವ ಮೂಲಕ ನಾವೆಲ್ಲರೂ ಶ್ರೇಷ್ಠರಾಗುವ ಸಾಮರ್ಥ್ಯವನ್ನು ಹೊಂದಿದ್ದೇವೆ. ನಮ್ಮ ಗುರಿಗಳನ್ನು ಸಾಧಿಸಲು ನಾವು ಸಮರ್ಥರಲ್ಲ ಎಂದು ಯೋಚಿಸುವ ಮೂಲಕ ನಮ್ಮನ್ನು ನಾವು ಮಿತಿಗೊಳಿಸಬಾರದು ಎಂದು ವಿವೇಕಾನಂದರ ವಾಣಿಯನ್ನು ಉಲ್ಲೇಖಿಸಿ ನುಡಿದರು.

ಕಾರ್ಯಕ್ರಮದಲ್ಲಿ ಪ್ರಸಾದ ಭಕ್ತಿ ಸೇವೆ ವಹಿಸಿಕೊಂಡಿದ್ದ ಚಂದ್ರಶೇಖರ ಗಾರವಾಡ, ವಿಶ್ವನಾಥ ತೊಂತನಾಳರನ್ನು ಸನ್ಮಾನಿಸಲಾಯಿತು.

ಕಸ್ತೂರಿಬಾಯಿ ಕಮ್ಮಾರ ಪ್ರಾರ್ಥನಾ ಗೀತೆ ಹಾಡಿದರು. ಕೋಶಾಧ್ಯಕ್ಷ ಎಂ.ಬಿ. ಚೆನ್ನಪ್ಪಗೌಡರ ಸ್ವಾಗತ ನುಡಿಗಳನ್ನಾಡಿದರು. ಸಮಿತಿಯ ನಿರ್ದೇಶಕ ಬಿ.ಎನ್. ಯರನಾಳ ಕಾರ್ಯಕ್ರಮ ನಿರೂಪಿಸಿದರು. ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಬಸವರಾಜ ಸುಂಕದ, ಸಹ ಕಾರ್ಯದರ್ಶಿ ಎಂ.ಕೆ. ಲಕ್ಕುಂಡಿ, ಕೋಶಾಧ್ಯಕ್ಷ ಎಂ.ಬಿ. ಚೆನ್ನಪ್ಪಗೌಡರ್, ಸಹಕೋಶಾಧ್ಯಕ್ಷ ಆರ್.ಬಿ. ಒಡೆಯರ, ನಿರ್ದೇಶಕರ